ಸಂಪುಟ : 9 ಸಂಚಿಕೆ 151 ಪುಟ : 4 ಬೆಲೆ: 3.00 ಶನಿವಾರ ಜುಲೈ 20 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 151 Pages : 4 Price : 3.00 Saturday July 20 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜುಲೈ 20 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 ಅಮರೇಶ್ವರ ನಗರ, ತಾಜನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 31 ಸೋಡಾದವರ ಲೈನ್, ಜಿಗ ಜಿಗಣಿ ಲೈನ್, ದೇಶಪಾಂಡೆ ಲೈನ್, ಮಾಬುಸುಬಾನಿ ಕಟ್ಟಿ, ಜನತಾ ಬಜಾರ್, ಜವಳಗಲ್ಲಿ, ದರ್ಗಾ ಲೈನ್ ಉಳಿದ ಕೆಲವು ಭಾಗಗಳು, ರಂಗನವಾಡ ಹಳೆ ಕಚೇರಿ ರಸ್ತೆ, ಗುಜ್ಜರ್ ಬಸ್ತಿ ಲೈನ್, ಜೋಡ ಮಾರುತಿ ಗುಡಿ ಲೈನ್, ಸುಣಗಾರ ಓಣಿ, ಹಸಿರು ಕೆರೆ ದಿಬ್ಬ.

ವಾರ್ಡ್ ನಂ. 30, 34, 35 ಹುಡ್ಕೋ ಪೂರ್ತಿ ಭಾಗಗಳು, 46 ಪ್ಲಾಟ್, ವಡ್ಡರಗೇರಿ, ಮೂರು ಶಿಳ್ಳಿನ ವಕಾರ, ರಾಮನಗರ, ಸೇವಾಲಾಲ್ ನಗರ, ಬಾಪೂಜಿ ನಗರ, ಆದರ್ಶ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 11 ನಿಸರ್ಗ ಬಡಾವಣೆ, ಹನುಮಂತ ದೇವರ ಗುಡಿ ಲೈನ್, ಕಾಶಿ ವಿಶ್ವನಾಥನಗರ, ನಾಗಪ್ಪನ ಕಟ್ಟಿ ಲೈನ್, ಗಾಣಿಗೇರ ಭವನ, ರಿಂಗ್ ರೋಡ್ ಭಾಗಗಳು, ಶಿವ ಬಸವ ನಗರ.

ವಾರ್ಡ್ ನಂ. 2 ಸೆಟ್ಲಮೆಂಟ ಗಾಂಧಿನಗರ, ಹರಿಣಶಿಕಾರಿ ಓಣಿ, ಹನುಮಂತ ದೇವರ ಗುಡಿ ಲೈನ್, ಸಬ್ ಜೈಲ್ ರೋಡ್, ಸ್ಲಾಬ್ ಮನೆ, ವೆಲ್ಫೇರ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ರೋಣದಲ್ಲಿ ಸಂವಾದ ಸಭೆ, ಅದಾಲತ್

■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಯ ಮತ್ತು ಪಾಲನಾ ವಿಭಾಗ ಹೆಸ್ಕಾಂ ರೋಣದ ಕಾರ್ಯ ಮತ್ತು ಪಾಲನಾ ಉಪ-ವಿಭಾಗೀಯ ಕಚೇರಿ ಮಟ್ಟದಲ್ಲಿ ಸಂಬಂಧಪಟ್ಟ ಗ್ರಾಹಕರ ಕುಂದುಕೊರತೆ ಬಗೆಹರಿಸುವ ಸಲುವಾಗಿ ಸಂವಾದ ಸಭೆ ಹಾಗೂ ಅದಾಲತ್ ಜುಲೈ 20 ರಂದು ಶನಿವಾರ ಮಧ್ಯಾಹ್ನ 3:00 ರಿಂದ ಸಾಯಂಕಾಲ 05.30 ಘಂಟೆಯ ವರೆಗೆ ಕಾರ್ಯ ಮತ್ತು ಪಾಲನಾ ಉಪ ವಿಭಾಗೀಯ ಕಚೇರಿ ಹು.ವಿ.ಸ.ಕಂ.ನಿ ರೋಣ, ಗಜೇಂದ್ರಗಡ, ನರಗುಂದ ಇಲ್ಲಿ ಸಭೆ ಕರೆಯಲಾಗಿದೆ. ಉಪ-ವಿಭಾಗೀಯ ವ್ಯಾಪ್ತಿಯ ಗ್ರಾಹಕರು ತಮ್ಮ ವಿದ್ಯುತ್ ಸಮಸ್ಯೆಗಳ ಕುರಿತು ಚರ್ಚಿಸಿ ಸಲಹೆ ನೀಡಬಹುದೆಂದು ಕಾರ್ಯನಿರ್ವಾಹಕ ಇಂಜಿನೀಯರ್(ವಿ) ಕಾರ್ಯ ಮತ್ತು ಪಾಲನಾ ವಿಭಾಗ ಹು.ವಿ.ಸ.ಕಂ.ನಿ ರೋಣ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಡೆಂಘೀ ಜಾಗೃತಿ ಜಾಥಾ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಎಂಜಿಎಂ ಫೌಂಡೇಶನ್‌ನ ಎಂಜಿಎಂ ಯೂನಿವರ್ಸಲ್ ಸ್ಕೂಲ್, ಮುಕ್ತಿಮಂದಿರ ಮಹರ್ಷಿ ಸ್ಕೂಲ್ ವಿದ್ಯಾರ್ಥಿಗಳಿಂದ ಜು.20ರ ಬೆಳಿಗ್ಗೆ 10.30ಕ್ಕೆ ಪಟ್ಟಣದ ಪ್ರಮುಖ ಮಾರ್ಗದಲ್ಲಿ ಡೆಂಘೀ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪಟ್ಟಣದ ಹಳ್ಳದಕೇರಿಯಿಂದ ಜಾಥಾ ಪ್ರಾರಂಭಗೊಳ್ಳಲಿದ್ದು, ಜಾಥಾದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಸುಭಾಸ್ ದಾಯಗೊಂಡ ಸೇರಿ ಹಲವರು ಪಾಲ್ಗೊಂಡು ಮಾರ್ಗದರ್ಶನ ನೀಡುವರು. ಹಿರಿಯ ಆರೋಗ್ಯ ನಿರೀಕ್ಷಕ ಬಿ.ಎಸ್. ಹಿರೇಮಠ ಡೆಂಘೀ ನಿಯಂತ್ರಣ ಮತ್ತು ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

**ಆಹಾರ ಪೂರೈಕೆಯ ಬಿಲ್ ಮಂಜೂರಿ ಮಾಡಲು ಜಿಲ್ಲಾಧಿಕಾರಿಗಳಿಗೆ ಮನವಿ**

## 3 ವರ್ಷ ಕಳೆದರೂ ಬಾಕಿ ಉಳಿದ ಹಣ!



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ 2021ರಲ್ಲಿ ದೇಶದಲ್ಲಿ ಕಂಡುಬಂದ ಕೊರೋನಾ ಭೀಕರ ರೋಗದ ಸಂದರ್ಭದಲ್ಲಿ ಪಟ್ಟಣದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಆರೋಗ್ಯ ಸಿಬ್ಬಂದಿಗಳಿಗೆ ಮತ್ತು ಕೊರೋನಾ ಬಾಧೆಗೊಳಗಾದ ರೋಗಿಗಳಿಗೆ ನಿತ್ಯ ಉಪಹಾರ-ಊಟ ಪೂರೈಸಿದ ಹಣವನ್ನು ಪಾವತಿಸದೇ ಬಾಕಿ ಇರಿಸಿಕೊಂಡಿದ್ದು, ಶೀಘ್ರ ಪಾವತಿಸುವಂತೆ ಆಹಾರ ಪೂರೈಸಿದ ಹೊಟೇಲ್ ಮಾಲೀಕ ಇಸ್ಮಾಯಿಲ್ ಅಡೂರ ಜಿಲ್ಲಾಧಿಕಾರಿ ಗೋವಿಂದರೆಡ್ಡಿಯವರಿಗೆ ಮನವಿ ಮಾಡಿಕೊಂಡರು.

ಜಿಲ್ಲಾಧಿಕಾರಿಗಳು ಪಟ್ಟಣಕ್ಕೆ ಆಗಮಿಸಿದ ಸಂದರ್ಭದಲ್ಲಿ ಅವರಿಗೆ ಮನವಿ ಸಲ್ಲಿಸಲಾಯಿತು. ಈ ವೇಳೆಯಲ್ಲಿ ಆರೋಗ್ಯ ಸಿಬ್ಬಂದಿಗಳಿಗೆ ಮತ್ತು ಕೊರೋನಾ ರೋಗದಿಂದ ಬಾಧೆಗೊಳಗಾದ ರೋಗಿಗಳಿಗೆ ನಿತ್ಯ ಉಪಹಾರ, ಊಟ ಪೂರೈಸಿದ ಸುಮಾರು 1 ಲಕ್ಷ 49 ಸಾವಿರ ರೂಗಳನ್ನು ಇಲ್ಲಿಯವರೆಗೂ ಮಂಜೂರೂ ಮಾಡಿಲ್ಲ. ಇದರ ಬಗ್ಗೆ ಕ್ರಮ ಕೈಗೊಂಡು ಕೂಡಲೇ ಹಣ ಮಂಜೂರು ಮಾಡಬೇಕೆಂದು ವಿನಂತಿಸಿದರು.

ಜಿಲ್ಲಾಧಿಕಾರಿಗಳು, ಅಂದಿನ ದಾಖಲೆಗಳನ್ನು ಪರಿಶೀಲಿಸಿ ಈ ಕುರಿತಂತೆ ಆದಷ್ಟು ಶೀಘ್ರ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ್, ತಹಸೀಲ್ದಾರ ವಾಸುದೇವ ಸ್ವಾಮಿ, ಮುಖ್ಯಾಧಿಕಾರಿ ಮಹೇಶ ಹಡಪದ, ಶರಣು ಗೋಡಿ, ಶಂಕರ ಗೋಡಿ, ಪ್ರಕಾಶ ಮುಳಗುಂದ ಮುಂತಾದವರಿದ್ದರು.

ಇದಕ್ಕೂ ಮುನ್ನ ತಾಲೂಕ ಕಚೇರಿಗೆ ಆಗಮಿಸಿದ ಜಿಲ್ಲಾಧಿಕಾರಿಗಳನ್ನು ತಹಸೀಲ್ದಾರ ವಾಸುದೇವಸ್ವಾಮಿ ಹಾಗೂ ಸಿಬ್ಬಂದಿಗಳು ಸ್ವಾಗತಿಸಿದರು. ಈ ವೇಳೆ ತಾಲೂಕಿನ ಸಂಕ್ಷಿಪ್ತ ಮಾಹಿತಿ, ಗ್ರಾಮಗಳು, ನಾಡಕಚೇರಿ, ಕಚೇರಿ ಸಿಬ್ಬಂದಿಗಳು, ಮುಖ್ಯವಾದ ಸಮಸ್ಯೆಗಳ ಮಾಹಿತಿ ಪಡೆದುಕೊಂಡರು. ಸಿಬ್ಬಂದಿಗಳೊಂದಿಗೆ ಮಾತನಾಡಿ ಸಲಹೆ ನೀಡಿದರು. ಕಂದಾಯ ಅಧಿಕಾರಿ ಬಿ.ಎಂ. ಕಾತ್ರಾಳ ಇದ್ದರು.

**ನಗರಸಭೆಯ ವಿಶೇಷ ಸಾಮಾನ್ಯ ಸಭೆಯಲ್ಲಿ ಗದ್ದಲವೆಬ್ಬಿಸಿದ ವಕಾರಸಾಲು ಮುಂಗಡ ಬಾಡಿಗೆ ವಿಚಾರ**

# ತಪ್ಪಿತಸ್ಥರ ವಿರುದ್ಧ ಪ್ರಕರಣ ದಾಖಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯ ಸಭಾಭವನದಲ್ಲಿ ಶುಕ್ರವಾರ ನಡೆದ ವಿಶೇಷ ಸಾಮಾನ್ಯ ಸಭೆ ಕೋಲಾಹಲಕ್ಕೆ ಕಾರಣವಾಗಿತ್ತು. ಗದಗ-ಬೆಟಗೇರಿ ನಗರಸಭೆಯ ಸ್ವತ್ತಾಗಿರುವ ಕ್ಲಾಥ್ ಮಾರ್ಕೆಟ್ ಹಾಗೂ ಗ್ರೇನ್ ಗ್ರಾಸರಿ ಮಾರುಕಟ್ಟೆಯಲ್ಲಿನ ಮಳಿಗೆಗಳಿಗೆ ನಗರಸಭೆಯ ಗಮನಕ್ಕೆ ತಾರದೇ 5 ವರ್ಷದ ಬಾಡಿಗೆಯನ್ನು ಮುಂಗಡವಾಗಿ ಭರಿಸಿರುವುದು ಗಂಭೀರ ಲೋಪವಾಗಿದ್ದು, ತಕ್ಷಣವೇ ಹಣ ಭರಿಸಿದ ಎಲ್ಲರಿಗೂ ಹಣ ಹಿಂದಿರುಗಿಸಿ, ಈ ಅಕ್ರಮದಲ್ಲಿ ಭಾಗಿಯಾಗಿರುವವರ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ನಗರಸಭೆ ಸದಸ್ಯರು ಒಕ್ಕೊರಲಿನಿಂದ ಒತ್ತಾಯಿಸಿದರು.

ಸಭೆ ಪ್ರಾರಂಭವಾಗುತ್ತಿದ್ದಂತೆ ವಿರೋಧ ಪಕ್ಷದ ನಾಯಕ ಎಲ್.ಡಿ. ಚಂದಾವರಿ ಮಾತನಾಡಿ, ಮುಂಗಡ ಬಾಡಿಗೆ ತುಂಬಿರುವ ವಾಣಿಜ್ಯ ಮಳಿಗೆಗಳ ಬಾಡಿಗೆ ವಿಷಯವಾಗಿ ಸಾಮಾನ್ಯ ಸಭೆಯಲ್ಲಿ ಚರ್ಚೆಯಾಗಿಲ್ಲ. ಠರಾವು ಮಾಡಿಲ್ಲ. ಅಲ್ಲದೆ, ಈ ಪ್ರಕರಣ ನ್ಯಾಯಾಲಯದಲ್ಲಿದೆ. ಆದರೂ ಅವರು ಬಾಡಿಗೆ ತುಂಬಿದ್ದು ಅಪರಾಧವಾಗಿದೆ. ಈ ರೀತಿಯ ಗಂಭೀರ ಅಪರಾಧ ಎಸಗಿದವರ ಮೇಲೆ ಪೌರಾಯುಕ್ತರು ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಬೇಕು. ಇದು ಇಂದಿನ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರ ಅಭಿಪ್ರಾಯವಾಗಿದ್ದು, ತಪ್ಪಿತಸ್ಥರಿಗೆ ಬಿಸಿ ಮುಟ್ಟಿಸಿ ಎಂದು ಆಕ್ರೋಶ ಹೊರಹಾಕಿದರು.




ವಾಣಿಜ್ಯ ಮಳಿಗೆಗಳ ಮುಂಗಡ ಬಾಡಿಗೆ ಹಣ ಸುಮಾರು 26 ಲಕ್ಷ ರೂ ಚಲನ್ ಮೂಲಕ ಸರ್ಕಾರಕ್ಕೆ ಜಮೆಯಾಗಿದೆ. ಅದನ್ನು ಅವರಿಗೆ ಮರಳಿಸುತ್ತೀರಾದರೂ, ಈ ಪ್ರಕರಣದಲ್ಲಿ ಪ್ರಭಾವಿಗಳ ಕೈವಾಡವಿದ್ದು, ಅವರು ಕ್ಲಾಥ್ ಮಾರ್ಕೆಟ್, ಗ್ರೇನ್ ಗ್ರೋಸರಿ ಅಂಗಡಿಕಾರರಿಂದ ಕೋಟ್ಯಾಂತರ ರೂಪಾಯಿ ಲಂಚ ಪಡೆದಿದ್ದಾರೆ ಎನ್ನುವ ಆರೋಪ ಕೇಳಿಬರುತ್ತಿದೆ. ಈ ಬಗ್ಗೆ ತನಿಖೆ ನಡೆಸಬೇಕು. ಅಲ್ಲದೇ ಸದ್ಯ ಬಾಡಿಗೆ ತುಂಬಿದ ಜನರಲ್ಲಿ ಶೇ. 40ರಷ್ಟು ಜನ ಮೃತಪಟ್ಟಿದ್ದಾರೆ. ಈ ಬಗ್ಗೆಯೂ ತನಿಖೆಯಾಗಬೇಕು ಎಂದು ಚಂದಾವರಿ ಒತ್ತಾಯಿಸಿದರು.

ಸಭೆಯಲ್ಲಿ ಅವಳಿ ನಗರದ ಬೀದಿ ದೀಪಗಳ ನಿರ್ವಹಣೆಯಲ್ಲಿ ಆಗುತ್ತಿರುವ ವಿಳಂಬ, ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆ, ಟೆಂಡರ್ ಕರೆಯದೇ ಸತಾಯಿಸುತ್ತಿರುವ ಅಧಿಕಾರಿಗಳ ಅಮಾನತ್ತಿಗೆ ಒತ್ತಾಯ ಸೇರಿದಂತೆ ಹಲವಾರು ಪ್ರಮುಖ ವಿಷಯಗಳಿಗೆ ಸಭೆಯಲ್ಲಿ ಚರ್ಚೆಯಾದವು.

ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷೆ ಸುನಂದಾ ಬಾಕಳೆ, ನಗರಸಭೆಯ ಪ್ರಭಾರ ಪೌರಾಯುಕ್ತ ಪ್ರಶಾಂತ ವರಗಪ್ಪನವರ ಸೇರಿದಂತೆ ಹಿರಿಯ ಅಧಿಕಾರಿಗಳು, ಸದಸ್ಯರು ಹಾಜರಿದ್ದರು.

ನಗರಸಭೆಯ ಆಡಳಿತ ಪಕ್ಷದ ಸದಸ್ಯ ರಾಘವೇಂದ್ರ ಯಳವತ್ತಿ ಮಾತನಾಡಿ, ವಾಣಿಜ್ಯ ಮಳಿಗೆಗಳ ಮುಂಗಡ ಬಾಡಿಗೆ ವಿಷಯವಾಗಿ ಬಿಜೆಪಿ ಕೂಡಾ ಈಗಾಗಲೇ ಉಪಲೋಕಾಯುಕ್ತರಿಗೆ, ಇಲಾಖೆಯ ಪ್ರಧಾನ ಕಾರ್ಯದರ್ಶಿಗೂ ದಾಖಲೆ ಸಮೇತ ದೂರ ಸಲ್ಲಿಸಲಾಗಿದೆ. ಕಾಂಗ್ರೆಸ್ ಸದಸ್ಯರು ವಾಣಿಜ್ಯ ಮಳಿಗೆಗಳ ಬಗ್ಗೆ ಮಾತ್ರ ವಿಶೇಷ ಆಸಕ್ತಿ ವಹಿಸುತ್ತಿದ್ದಾರೆ. ಅವಳಿ ನಗರದ 54 ವಕಾರ ಸಾಲುಗಳ ನೂರಾರು ಕೋಟಿ ಬೆಲೆಬಾಳುವ ಆಸ್ತಿಯನ್ನು ಕಬಳಿಸುವುದಕ್ಕಾಗಿ ಜಿಲ್ಲಾ ಉಸ್ತುವಾರಿ ಸಚಿವರು ಪ್ರಾಧಿಕಾರ ರಚನೆ ಮಾಡಿದ್ದಾರೆ ಎಂದಾಗ ಸಭೆಯಲ್ಲಿ ಗದ್ದಲ, ಆರೋಪ-ಪ್ರತ್ಯಾರೋಪಗಳು ಮುಗಿಲು ಮುಟ್ಟಿತು.



**ತಹಸೀಲ್ದಾರ ಕಚೇರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಡಿಸಿ ಗೋವಿಂದರೆಡ್ಡಿ**

# ಬಾಕಿ ಅರ್ಜಿ ವಿಲೇವಾರಿ ಮಾಡಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸರಕಾರದ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಮತ್ತು ಸರಕಾರಿ ಕಚೇರಿಗಳಿಗೆ ಸಾರ್ವಜನಿಕರ ಅಲೆದಾಟ ತಪ್ಪಿಸಿ ಸರ್ಕಾರದ ನಿರ್ದೇಶನದ ಪ್ರಕಾರ ಕೆಲಸ ಮಾಡಲು ಜಿಲ್ಲಾಡಳಿತ ಸನ್ನದ್ಧವಿದೆ ಎಂದು ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ತಹಸೀಲ್ದಾರ ಕಚೇರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದರು.

ಎಲ್ಲ ತಾಲ್ಲೂಕುಗಳ ಭೌಗೋಳಿಕ ಪರಿಶೀಲನೆ ನಡೆಸಲಾಗುತ್ತಿದ್ದು, ಪರಿಶೀಲನೆ ವೇಳೆ ಸಮಸ್ಯೆಗಳು ಕಂಡು ಬಂದರೆ ಅವುಗಳನ್ನು ಸರಿಪಡಿಸಲಾಗುವುದು. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಒಳ್ಳೆಯ ಮಳೆಯಾಗುತ್ತಿದ್ದು, ಕುಡಿಯುವ ನೀರಿನ ಸಮಸ್ಯೆ ಇಲ್ಲ. ಜಿಲ್ಲೆಯಲ್ಲಿ ಪ್ರತಿನಿತ್ಯ 60-70 ಡೆಂಘಿ ಕೇಸ್‌ಗಳ ಟೆಸ್ಟ್ ಮಾಡಲಾಗುತ್ತಿದ್ದು, ಅದರಲ್ಲಿ



ಶೇ.1ರಷ್ಟು ಪಾಸಿಟಿವ್ ಬರುತ್ತಿದೆ. ಕಳೆದ ವಾರದಿಂದ ಪಾಸಿಟಿವ್ ಪ್ರಮಾಣ ಕಡಿಮೆ ಇದೆ. ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಲಾರ್ವಾ ಸರ್ವೆ ನಡೆಸಿ ನೀರು ಶೇಖರಣೆಯಾಗುವ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡುವಂತೆ ಆರೋಗ್ಯ ಇಲಾಖೆ ವತಿಯಿಂದ ಜಾಗೃತಿ ಕಾರ್ಯಕ್ರಮಗಳು ಜರುಗುತ್ತಿವೆ ಎಂದರು.

ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ನಗರಾಭಿವೃದ್ಧಿ ಕೋಶದ ಮಾರುತಿ ಬ್ಯಾಕೋಡ್, ತಹಸೀಲ್ದಾರ ಅನಿಲ ಬಡಿಗೇರ, ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಗ್ರೇಡ್-2 ತಹಸೀಲ್ದಾರ ಭಜಂತ್ರಿ, ಎಡಿಎ ರೇವಣೆಪ್ಪ ಮನಗೂಳಿ, ಕಂದಾಯ ನಿರೀಕ್ಷಕ ಅಡಿವೆಣ್ಣವರ, ಎಸ್.ಎಸ್. ಅಸ್ಕಿ ಮುಂತಾದವರು ಉಪಸ್ಥಿತರಿದ್ದರು.

ತಹಸೀಲ್ದಾರ ಕಚೇರಿಯ ಅಟಲ್‌ಜೀ ಜನಸ್ನೇಹಿ ಕೇಂದ್ರ, ಆಧಾರ್ ಕೇಂದ್ರಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಅಲ್ಲಿಯ ಸಿಬ್ಬಂದಿಗಳೊಡನೆ ಚರ್ಚಿಸಿ ಮಾಹಿತಿ ಪಡೆದರು. ಬಾಕಿ ಇರುವ ಅರ್ಜಿಗಳನ್ನು ಶೀಘ್ರವೇ ಸರಿಪಡಿಸುವಂತೆ ಸೂಚನೆ ನೀಡಿದರು. ಸಬ್ ರಿಜಿಸ್ಟ್ರಾರ್ ಕಚೇರಿ ಮತ್ತು ಭೂ ದಾಖಲೆಗಳ ಇಲಾಖೆಗಳಿಗೂ ತೆರಳಿ ಪರಿಶೀಲನೆ ನಡೆಸಿದರು. ತದನಂತರ ಪಟ್ಟಣ ಪಂಚಾಯಿತಿ ಕಚೇರಿಗೆ ತೆರಳಿ ಸಿಬ್ಬಂದಿಗಳೊಡನೆ ಚರ್ಚಿಸಿ, ಘನತ್ಯಾಜ್ಯ ವಸ್ತುಗಳ ವಿಲೇವಾರಿ ಘಟಕಕ್ಕೂ ಭೇಟಿ ನೀಡಿದರು.

**ಲಾರ್ವಾ ಸಮೀಕ್ಷಾ ಅಭಿಯಾನಕ್ಕೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಚಾಲನೆ**

# ಡೆಂಘೀ ನಿಯಂತ್ರಣಕ್ಕೆ ಮುಂದಾಗಿ; ಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ದಿನದಿಂದ ದಿನಕ್ಕೆ ಡೆಂಘೀ ಹರಡುವಿಕೆಯ ಪ್ರಮಾಣ ಅಧಿಕವಾಗುತ್ತಿದ್ದು, ಡೆಂಘೀ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಿರ್ಮೂಲನೆ ಮಾಡುವ ಮೂಲಕ ಡೆಂಘೀ ನಿಯಂತ್ರಣಕ್ಕೆ ಮುಂದಾಗುವಂತೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹೇಳಿದರು.

ನಗರದ ತ್ರಿಕೂಟೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮದ ಅಡಿಯಲ್ಲಿ ವಿವಿಧ ಇಲಾಖೆಗಳ ಸಹಯೋಗದಲ್ಲಿ ಗದಗ ಶಹರ ಲಾರ್ವಾ ಸಮೀಕ್ಷಾ ಅಭಿಯಾನಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಯಾವುದೇ ಜ್ವರವಿದ್ದರೂ ಮೊದಲು ರಕ್ತ ಪರೀಕ್ಷೆ



ಮಾಡಿಸಬೇಕು. ಆರೋಗ್ಯ ಸಿಬ್ಬಂದಿಯು ನಿಮ್ಮ ಮನೆಯ ಹತ್ತಿರ ಬಂದಾಗ ಜ್ವರ ಪೀಡಿತರು ರಕ್ತ ಲೇಪನ ಸಂಗ್ರಹಿಸಲು ಸಹಕರಿಸಬೇಕು. ಕೀಟನಾಶಕ ಸಿಂಪಡಿಸಲು ಬರುವ ಆರೋಗ್ಯ ಸಿಬ್ಬಂದಿಗೆ ನೆರವಾಗಿ, ಎಲ್ಲ ಕೋಣೆಗಳಿಗೂ ಕೀಟನಾಶಕ ಸಿಂಪಡಿಸಲು ಅವಕಾಶ ನೀಡಬೇಕು. ಕೀಟನಾಶಕ ಸಿಂಪಡಿಸಿದ ನಂತರ ಆರು ವಾರಗಳವರೆಗೆ ಸುಣ್ಣ-ಬಣ್ಣವನ್ನು ಗೋಡೆಗಳಿಗೆ ಬಳಿಯಬಾರದು. ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಚರಂಡಿ ನಾಲೆಗಳಲ್ಲಿ ಕಸಕಡ್ಡಿಗಳನ್ನು ಎಸೆಯದೇ ನೀರಿನ ಸರಾಗವಾದ ಹರಿಯುವಿಕೆಗೆ ತಡೆಯಾಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಮಾತನಾಡಿ, ಈಡಿಸ್ ಸೊಳ್ಳೆಗಳು ಮನೆಯಲ್ಲಿರುವ ನೀರು ಶೇಖರಣೆಯ ತೊಟ್ಟಿಗಳು, ಬ್ಯಾರಲ್‌ಗಳು, ಡ್ರಮ್‌ಗಳು, ಹೂವಿನ ಕುಂಡ ಮುಂತಾದವುಗಳಲ್ಲದೇ ಮನೆ ಸುತ್ತ ಮುತ್ತ ಬಯಲಲ್ಲಿ ಬಿಸಾಡಿದ ಪಿಂಗಾಣಿ ವಸ್ತುಗಳು, ಪ್ಲಾಸ್ಟಿಕ್ ಕಪ್ಪುಗಳು, ಟೈರ್‌ಗಳು ಮತ್ತಿತರ ವಸ್ತುಗಳಲ್ಲಿ ನೀರು ಸಂಗ್ರಹವಾದಾಗ ಉತ್ಪತ್ತಿಯಾಗುತ್ತವೆ. ಅವುಗಳ ಸಂಪೂರ್ಣ ನಾಶ ಮಾಡುವ ಮೂಲಕ ಡೆಂಗ್ಯೂ ನಿಯಂತ್ರಣಕ್ಕೆ ಎಲ್ಲರೂ ಸಹಕಾರ ನೀಡುವಂತೆ ಕೋರಿದರು.

▶▶ 3ನೇ ಪುಟಕ್ಕೆ

ಪ್ರಸಕ್ತ ವರ್ಷದಲ್ಲಿ ಡೆಂಘೀ ಕಾಯಿಲೆ ಅಧಿಕವಾಗಿದ್ದು, ಲಾರ್ವಾ ಸಮೀಕ್ಷೆ ಕಾರ್ಯವನ್ನು ಸರಿಯಾಗಿ ನಿರ್ವಹಿಸಬೇಕು. ಅಲ್ಲದೇ ಲಾರ್ವಾ ಸಮೀಕ್ಷೆ ವೇಳೆ ಮನೆ ಮನೆಗೆ ತೆರಳಿ ಕುಟುಂಬದ ಸದಸ್ಯರಿಗೆ ಸೊಳ್ಳೆಗಳ ಉತ್ಪತ್ತಿ ತಾಣಗಳ ಬಗ್ಗೆ ಮಾಹಿತಿ ನೀಡಿ ಅವುಗಳನ್ನು ಸಂಪೂರ್ಣ ನಾಶಪಡಿಸುವ ವಿಧಾನವನ್ನೂ ತಿಳಿಸಿಕೊಡಬೇಕು.

**- ಗೋವಿಂದರೆಡ್ಡಿ.**
ಗದಗ ಜಿಲ್ಲಾಧಿಕಾರಿಗಳು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಮನೆಯಲ್ಲಿರುವ ನೀರು ಸಂಗ್ರಹಣಾ ಪಾತ್ರೆಗಳು ಮತ್ತು ಡ್ರಮ್‌ಗಳನ್ನು ಸರಿಯಾದ ಮುಚ್ಚಳದಿಂದ ಮುಚ್ಚಿ ಹಾಗೂ ದೊಡ್ಡ ತೊಟ್ಟಿಗಳನ್ನು ವಾರಕ್ಕೊಮ್ಮೆ ಸಂಪೂರ್ಣವಾಗಿ ಖಾಲಿ ಮಾಡಿ, ಸರಿಯಾಗಿ ಮುಚ್ಚಿ. ಮನೆಯ ಎಲ್ಲ ಕಿಟಕಿಗಳಿಗೆ ಜಾಲರಿಗಳನ್ನು ಅಳವಡಿಸಿಕೊಳ್ಳಬೇಕು. ಮಲಗುವಾಗ ಸೊಳ್ಳೆ ಪರದೆಯನ್ನು ಉಪಯೋಗಿಸಬೇಕು. ಸೊಳ್ಳೆ ಮರಿಗಳನ್ನು ತಿನ್ನುವ ಗ್ಯಾಂಬೂಸಿಯಾ ಮತ್ತು ಗಪ್ಪಿಯೆಂಬ ಲಾರ್ವಾಹಾರಿ ಮೀನುಗಳನ್ನು ಬಿಟ್ಟು ಸೊಳ್ಳೆಗಳ ಉತ್ಪತ್ತಿಯನ್ನು ನಿಯಂತ್ರಿಸಬೇಕು ಎಂದರು.

# ರಸ್ತೆ ದುರಸ್ಥಿಗೆ ಸಾರ್ವಜನಿಕರ ಆಗ್ರಹ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ವಾರ್ಡ್ ನಂ-2ರ ದೂದನಾನಾ ದರ್ಗಾ ಬಳಿ ಇರುವ ರಸ್ತೆ ಸಂಪೂರ್ಣ ಹದಗೆಟ್ಟು ಹೋಗಿದೆ. ಬರುವ ಭಕ್ತರು, ರೈತರು, ಮಕ್ಕಳು, ವೃದ್ಧರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದು, ಕೂಡಲೇ ರಸ್ತೆ ದುರಸ್ಥಿಗೊಳಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಮಾತನಾಡಿ, 50 ಸಾವಿರದಷ್ಟು ಜನಸಂಖ್ಯೆಯನ್ನು ಹೊಂದಿರುವ ಪಟ್ಟಣದಲ್ಲಿ ರಸ್ತೆಗಳ ಸ್ಥಿತಿ ಅಯೋಮಯವಾಗಿದೆ. ಅದರಲ್ಲೂ ರೈತಾಪಿ ವರ್ಗದವರು ಹೆಚ್ಚಾಗಿರುವ ಮತ್ತು ನಿತ್ಯ ವಿವಿಧ ಜಿಲ್ಲೆ, ರಾಜ್ಯಗಳಿಂದ ಇಲ್ಲಿನ ಪ್ರಸಿದ್ಧ ದೂದನಾನಾ ದರ್ಗಾಕ್ಕೆ ಬರುವ ಸಾರ್ವಜನಿಕರಿಗೆ ಇಲ್ಲಿನ ರಸ್ತೆಯನ್ನು ನೋಡಿ ಜನಪ್ರತಿನಿಧಿಗಳ, ಅಧಿಕಾರಿಗಳ ಆಡಳಿತ ವೈಖರಿಯನ್ನು ಶಪಿಸುವಂತಾಗಿದೆ. ಪಟ್ಟಣದಲ್ಲಿನ ಬಹುತೇಕ ರಸ್ತೆಗಳು ಹಾಳಾಗಿದ್ದು ಅಭಿವೃದ್ಧಿ, ದುರಸ್ಥಿ ಕಾಮಗಾರಿಗಳು ನಿಂತು ಹೋಗಿವೆ.

ನಗರೋತ್ಥಾನ ಕಾಮಗಾರಿಗಳು ವರ್ಷದ ಹಿಂದೆ ಮುಗಿಯಬೇಕಾಗಿದ್ದು, ಇನ್ನೂ ಪ್ರಾರಂಭದ ಹಂತದಲ್ಲಿ ನಿಂತುಕೊಂಡಿವೆ. ಪುರಸಭೆ ವ್ಯಾಪ್ತಿಯಲ್ಲಿ ಈ ರಸ್ತೆ ಬರುವದರಿಂದ ಪುರಸಭೆಯವರು ಕೂಡಲೇ ಈ ಕುರಿತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಂಜುನಾಥ ಮುಳಗುಂದ, ಅಭಯ ಜೈನ್, ಮುತ್ತು ನೀರಲಗಿ, ಗಣೇಶ ನೂಲ್ವಿ, ಜಾವೀದ ಖಾನಜಾದೆ, ಮುಜಮಿಲ್ ಬೇಪಾರಿ, ಪ್ರಕಾಶ ಉದ್ದನಗೌಡ್ರ, ಶ್ರೀಕಾಂತ ಪಾಟೀಲ, ಇಸ್ಮಾಯಿಲ್ ಮುಳಗುಂದ, ನಿಂಗಪ್ಪ ಸಾಲಮನಿ ಶರಣಪ್ಪ ಕಣವಿ ಸೇರಿದಂತೆ ಅನೇಕರಿದ್ದರು.

## ಜುಲೈ 21ರಂದು ಗುರುಪೂರ್ಣಿಮೆ ನಿಮಿತ್ತ ಹಿಂದೂ ಜನಜಾಗೃತಿ ಸಮಿತಿಯ ಲೇಖನ

# ಧರ್ಮಸಂಸ್ಥಾಪನೆಯಲ್ಲಿ ಗುರು-ಶಿಷ್ಯ ಪರಂಪರೆ



ಮಾಯೆಯ ಭವಸಾಗರದಿಂದ ಶಿಷ್ಯ ಮತ್ತು ಭಕ್ತನನ್ನು ಹೊರತರುವ, ಅವನಿಂದ ಆವಶ್ಯಕವಿರುವ ಸಾಧನೆಯನ್ನು ಮಾಡಿಸಿಕೊಳ್ಳುವ ಮತ್ತು ಕಠಿಣ ಸಮಯದಲ್ಲಿ ಅವನಿಗೆ ಅತ್ಯಂತ ಹತ್ತಿರದಿಂದ ಹಾಗೂ ನಿರಪೇಕ್ಷ ಪ್ರೇಮದಿಂದ ಆಧಾರವನ್ನು ನೀಡಿ ಸಂಕಟಮುಕ್ತ ಮಾಡುವವರು ಗುರುಗಳೇ ಇದ್ದಾರೆ. ಇಂತಹ ಪರಮಪೂಜನೀಯ ಗುರುಗಳ ಬಗ್ಗೆ ಕೃತಜ್ಞತೆ ವ್ಯಕ್ತಮಾಡುವ ದಿನವೆಂದರೆ ಗುರುಪೂರ್ಣಿಮೆ.

ಗುರುಪೂರ್ಣಿಮೆ ಮಹೋತ್ಸವವನ್ನು ಎಲ್ಲೆಡೆ ಆಷಾಢ ಹುಣ್ಣಿಮೆಯಂದು ಆಚರಿಸಲಾಗುತ್ತದೆ. ಗುರು ಎಂದರೆ ಈಶ್ವರನ ಸಗುಣ ರೂಪ. ವರ್ಷಾದ್ಯಂತ ಪ್ರತಿಯೊಬ್ಬ ಗುರುಗಳು ತಮ್ಮ ಭಕ್ತರಿಗೆ ಆಧ್ಯಾತ್ಮದ ಬೋಧಾಮೃತವನ್ನು ನೀಡುತ್ತಿರುತ್ತಾರೆ. ಆ ಗುರುಗಳ ಬಗ್ಗೆ ಕೃತಜ್ಞತೆಯನ್ನು ವ್ಯಕ್ತಪಡಿಸುವುದೇ ಗುರುಪೂರ್ಣಿಮೆ ಆಚರಿಸುವುದರ ಹಿಂದಿನ ಉದ್ದೇಶವಾಗಿದೆ.

ಗುರುಪೂರ್ಣಿಮೆಯು ಈಶ್ವರೀ ಕೃಪೆಯ ಒಂದು ಅಮೂಲ್ಯ ಪರ್ವಕಾಲವೇ ಆಗಿದೆ. 'ಗುರು-ಶಿಷ್ಯ ಪರಂಪರೆ'ಯು ಹಿಂದೂಗಳ ಲಕ್ಷಾವಧಿ ವರ್ಷಗಳ ಚೈತನ್ಯಮಯ ಸಂಸ್ಕೃತಿಯಾಗಿದೆ. ಆದರೆ ಕಾಲದ ಪ್ರವಾಹದಲ್ಲಿ ರಜ-ತಮಪ್ರಧಾನ ಸಂಸ್ಕೃತಿಯ ಪ್ರಭಾವದಿಂದಾಗಿ ಗುರು-ಶಿಷ್ಯ ಪರಂಪರೆಯನ್ನು ನಿರ್ಲಕ್ಷಿಸಲಾಗುತ್ತಿದೆ. ಗುರುಪೂರ್ಣಿಮೆಯ ನಿಮಿತ್ತದಿಂದ ಗುರುಪೂಜೆಯಾಗುತ್ತದೆ, ಹಾಗೆಯೇ ಗುರು-ಶಿಷ್ಯ ಪರಂಪರೆಯ ಶ್ರೇಷ್ಠತೆಯನ್ನು ಸಮಾಜಕ್ಕೆ ಹೇಳಲು ಸಾಧ್ಯವಾಗುತ್ತದೆ.

ಈ ದಿವ್ಯ ಗುರು-ಶಿಷ್ಯ ಪರಂಪರೆಯು ಆಶ್ರಮಗಳನ್ನು ಮಾತ್ರ ಸ್ಥಾಪಿಸಿದ್ದಲ್ಲ, ಸಮಾಜದಲ್ಲಿ ಧರ್ಮ-ಆಧ್ಯಾತ್ಮ-ಭಕ್ತಿಯನ್ನು ಹರಡುವ ಮೂಲಕ, ರಾಷ್ಟ್ರ ಮತ್ತು ಧರ್ಮವನ್ನು ರಕ್ಷಿಸುವ ಅಂದರೆ ಧರ್ಮವನ್ನು ಸ್ಥಾಪಿಸುವ ಮೂಲಕ ಸಾಮಾಜಿಕ ಜೀವನವನ್ನು ಉನ್ನತಗೊಳಿಸುವ ಕಾರ್ಯ ಮಾಡಿದೆ. ಹಾಗೂ ರಾಷ್ಟ್ರ ಮತ್ತು ಧರ್ಮರಕ್ಷಣೆಯ ಕಾರ್ಯವನ್ನು ಸಹ ಮಾಡಿದೆ. ಈ ಪರಂಪರೆಯಿಂದಾಗಿಯೇ ಅನೇಕ ವಿದೇಶಿ ಆಕ್ರಮಣಗಳ ನಡುವೆಯೂ ಹಿಂದೂ ಧರ್ಮ ಇಂದಿಗೂ ಉಳಿದಿದೆ.

ಯಾರು ರಜ-ತಮಾತ್ಮಕ ಹೀನಗುಣಗಳನ್ನು ಮತ್ತು ಅದರಿಂದಾಗಿ ಘಟಿಸುವ ಕಾಯಾ, ವಾಚಾ ಮತ್ತು ಮಾನಸಿಕ ಸ್ತರದಲ್ಲಿನ ಹೀನ ಕರ್ಮಗಳನ್ನು ತಿರಸ್ಕರಿಸುತ್ತಾನೆಯೋ ಅವನು ಸಂಕುಚಿತ ವಿಚಾರಗಳನ್ನು ತ್ಯಜಿಸಿ ವಿಶ್ವಕಲ್ಯಾಣದ ಬಗ್ಗೆ ವಿಚಾರ ಮಾಡುತ್ತಾನೆ. ಅಂತಹ ಹಿಂದೂ ರಾಷ್ಟ್ರಕ್ಕೆ ಈಗ ಎಲ್ಲೆಡೆ ಕೂಗು ಕೇಳುತ್ತಿದೆ. 'ಹಿಂದೂ ರಾಷ್ಟ್ರ' ಈಗ ಚಳುವಳಿಯಾಗಿ ಮಾರ್ಪಟ್ಟಿದೆ. ನೂರಾರು ಹಿಂದೂ ಸಂಘಟನೆಗಳು, ಕಾರ್ಯಕರ್ತರು ಈ ನಿಟ್ಟಿನಲ್ಲಿ ಪ್ರಯತ್ನ ಮಾಡುತ್ತಿದ್ದಾರೆ. ಆದ್ದರಿಂದ ಇದೊಂದು ರೀತಿಯಲ್ಲಿ ಯುಗ ಪರಿವರ್ತನೆಯ ಕಾಲವೇ ಆಗಿದೆ.

ವಿದ್ಯಾರಣ್ಯರು ದೊಡ್ಡ ಸಂತರು, ತತ್ವಜ್ಞಾನಿಗಳು, ಚಿಂತಕರು ಹಾಗೂ ವೇದಗಳ ಅಭ್ಯಾಸಕರಾಗಿದ್ದರು. ಅವರು ಮತಾಂತರಗೊಂಡಿದ್ದ ಹರಿಹರ ಮತ್ತು ಬುಕ್ಕರನ್ನು ಶುದ್ಧೀಕರಿಸಿ ಹಿಂದೂ ಧರ್ಮಕ್ಕೆ ಸೇರಿಸಿಕೊಂಡರು. ಅವರಿಗೆ ರಾಜಧರ್ಮದ ಶಿಕ್ಷಣ ನೀಡಿದರು ಮತ್ತು ಅವರ ಮೂಲಕ ವಿಜಯನಗರ ಸಾಮ್ರಾಜ್ಯದ ಅಡಿಪಾಯವನ್ನು ಹಾಕಿದರು. ವಿದ್ಯಾರಣ್ಯರ ಮಾರ್ಗದರ್ಶನದಲ್ಲಿ ಹರಿಹರ ಮತ್ತು ಬುಕ್ಕರು ಆದರ್ಶ ಶಿಷ್ಯರಂತೆ ರಾಜ್ಯಭಾರ ನಡೆಸಿದರು. ಇದರಿಂದ ಗುರುತತ್ವವು ಯಾವಾಗಲೂ ಧರ್ಮವನ್ನು ರಕ್ಷಿಸಲು ತನ್ನ ಶಿಷ್ಯರಿಗೆ ಆಜ್ಞಾಪಿಸಿದೆ ಅಥವಾ ಅವರಿಂದ ಈ ಕಾರ್ಯವನ್ನು ಮಾಡಿಸಿಕೊಂಡಿದೆ ಎಂಬುದು ಗಮನಕ್ಕೆ ಬರುತ್ತದೆ.

ಇಂದು, ಇದೇ ರೀತಿ ಧರ್ಮಸಂಸ್ಥಾಪನೆಯ ಕಾರ್ಯದ ಅವಶ್ಯಕತೆಯಿದೆ. ಹಾಗಾಗಿ ಈ ಧರ್ಮಸಂಸ್ಥಾಪನೆಯ ಕಾರ್ಯವನ್ನು ಕೇವಲ ಶಾರೀರಿಕ ಮತ್ತು ಬೌದ್ಧಿಕ ಸ್ತರದಲ್ಲಿ ಮಾಡಲು ಸಾಧ್ಯವಿಲ್ಲ. ಗುರುಗಳ ಮತ್ತು ಸಂತರ ಮಾರ್ಗದರ್ಶನ ಪಡೆದು ಕಾರ್ಯ ಮಾಡುವುದು ಅಪೇಕ್ಷಿತವಿದೆ. ಆದ್ದರಿಂದಲೇ ಹಿಂದೂ ಜನಜಾಗೃತಿ ಸಮಿತಿಯು ಗುರುಪೂರ್ಣಿಮೆಯ ದಿನ ಅಂದರೆ ಆಷಾಢ ಹುಣ್ಣಿಮೆ, 21 ಜುಲೈ 2024ರಂದು ದೇಶದ ಮೂಲೆ ಮೂಲೆಗಳಲ್ಲೂ ಗುರುಪೂರ್ಣಿಮಾ ಮಹೋತ್ಸವಗಳ ಆಯೋಜನೆ ಮಾಡಿ ಹಿಂದೂಗಳನ್ನು ಒಗ್ಗೂಡಿಸುವ ಪ್ರಯತ್ನ ಮಾಡುತ್ತಿದೆ. ಈ ಗುರುಪೂರ್ಣಿಮಾ ಮಹೋತ್ಸವದಲ್ಲಿ ಪಾಲ್ಗೊಂಡು ಗುರುಗಳ ಆಶೀರ್ವಾದ ಪಡೆಯೋಣ. ನಮ್ಮ ಜಿಲ್ಲೆಯಲ್ಲಿ ನಡೆಯಲಿರುವ ಗುರುಪೂರ್ಣಿಮಾ ಮಹೋತ್ಸವವು ಶ್ರೀ. ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪ, ಕೆ.ಸಿ. ರಾಣಿ ರಸ್ತೆ-ಗದಗ ಇಲ್ಲಿ ಸಾಯಂಕಾಲ 5.30ಕ್ಕೆ ನಡೆಯಲಿದೆ.

**- ಅಶೋಕ ಭೋಜ.**
ಜಿಲ್ಲಾ ಸಮನ್ವಯಕರು,
ಹಿಂದೂ ಜನಜಾಗೃತಿ ಸಮಿತಿ, ಗದಗ.

# ನಾಳೆ ಜಿಲ್ಲಾಡಳಿತದಿಂದ ಹಡಪದ ಅಪ್ಪಣ್ಣ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಹಡಪದ ಅಪ್ಪಣ್ಣನವರ ಜಯಂತಿಯನ್ನು ಜುಲೈ 21 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ತ್ರಿವಿಧ ದಾಸೋಹಿ ಪೂಜ್ಯ ಶ್ರೀ ಜಗದ್ಗುರು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಕಾರ್ಯಕ್ರಮದ ಸಾನಿಧ್ಯ ವಹಿಸಲಿದ್ದಾರೆ. ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ, ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರಾದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷರಾದ ಉಷಾ ಮಹೇಶ ದಾಸರ, ಉಪಾಧ್ಯಕ್ಷರಾದ ಸುನಂದಾ ಬಾಕಳೆ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ ಆಗಮಿಸುವರು.

ಹುಲಕೋಟಿ ಮುಖ್ಯ ಶಿಕ್ಷಕರಾದ ಎ.ವಿ.ಪ್ರಭು ಅವರು ಹಡಪದ ಅಪ್ಪಣ್ಣನವರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡಲಿದ್ದಾರೆ. ಕೆ.ಟಿ.ಉಮೇಶ ಭಜಂತ್ರಿ ಮತ್ತು ತಂಡ ವಚನ ಸಂಗೀತ ಪ್ರಸ್ತುತ ಪಡಿಸಲಿದ್ದಾರೆ.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರಯ್ಯಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.

# ಕೃಷಿ ಸಹಕಾರ ಪತ್ತಿನ ಸಂಘದ ಪದಾದಿಕಾರಿಗಳ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಕೂಲಹಳ್ಳಿ ಗ್ರಾಮದಲ್ಲಿ ಕೃಷಿ ಸಹಕಾರ ಪತ್ತಿನ ನೂತನ ಸಂಘಕ್ಕೆ, ರಿಟರ್ನಿಂಗ್ ಅಧಿಕಾರಿ ಬಸಮ್ಮನವರ ನೇತೃತ್ವದಲ್ಲಿ ಅಧ್ಯಕ್ಷರಾಗಿ ಸೋಮನಾಥ ಎಂ ಹಾಗೂ ಉಪಾಧ್ಯಕ್ಷರಾಗಿ ಮಲ್ಲೇಶ ಮಡಿವಾಳರಾಗಿ ಸೇರಿದಂತೆ 12 ಜನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಕೂಲಹಳ್ಳಿ ಗೋಣಿಬಸವೇಶ್ವರ ಮಠದ ಪೀಠಾಧಿಪತಿ ಪಟ್ಟದ ಚಿನ್ಮಯ ಸ್ವಾಮಿಗಳು, ನಾಟಿವೈದ್ಯ ಬಿ.ಬಿ. ಹೊಸುರಪ್ಪ, ಗ್ರಾ.ಪಂ ಅಧ್ಯಕ್ಷೆ ಗೌರಮ್ಮ ಮಾದಾಪುರ, ಬಸವರಾಜ ಜೋಗಿ, ಜಗದೀಶ, ಬಣಕಾರ ಮಂಜಣ್ಣ, ಗೋಣಿಬಸ್ಯಾನಾಯ್ಕ, ಹನಮಂತಪ್ಪ ಕೆ, ನಂದನ ಆರ್, ಸಾವಿತ್ರಮ್ಮ ಬಣಕಾರ, ನಾಗೇಶಪ್ಪ ಕಂಚೀಕೆರೆ, ಕಿರಣ ವಾಲ್ಮೀಕಿ, ಗೌಡ್ರ ಸಣ್ಣತಮ್ಮಪ್ಪ, ಭೋವಿ ವೆಂಕಟೇಶ, ಮಾರ್ತಾಂಡಪ್ಪ ಈಡಿಗರ, ಕಾಳೇಶಪ್ಪ, ಯು ಮಂಜುನಾಥ, ಕುಬೇರಪ್ಪ, ಹಾರಾಳ ಮೂಗಪ್ಪ, ಕೆ ಹೊನ್ನಪ್ಪ, ಶಂಕ್ರಾನಾಯ್ಕ, ಮದನ್ ಕುಮಾರ, ಗಂಟಿ ಶಿವಕುಮಾರ ಸೇರಿದಂತೆ ಇತರರು ಭಾಗವಹಿಸಿದ್ದರು.

# ನೇರ ಸಂದರ್ಶನದಲ್ಲಿ 112 ಅಭ್ಯರ್ಥಿಗಳ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ಗದಗ-ಬೇಟಗೇರಿಯಲ್ಲಿ ಗುರುವಾರ ಬೆಂಗಳೂರಿನ ಎಚ್.ಎ.ಎಲ್ ಅವರಿಂದ ಅಪ್ರೆಂಟಿಶಿಪ್ ತರಬೇತಿಗಾಗಿ ನೇರ ಸಂದರ್ಶನ ಏರ್ಪಡಿಸಲಾಗಿತ್ತು.

ಸಂದರ್ಶನಕ್ಕಾಗಿ ಆಗಮಿಸಿದ ಎಚ್‌ಎಎಲ್‌ನ ಅವಿನಾಶ ಹಾಗೂ ಗಿರೀಶ ಅಭ್ಯರ್ಥಿಗಳಿಗೆ ತಾಂತ್ರಿಕ ತರಬೇತಿಯೊಂದಿಗೆ ಉತ್ತಮ ಜೀವನವನ್ನು ರೂಪಿಸಿಕೊಳ್ಳಲು ತಿಳಿಸಿ, ಅಪ್ರೆಂಟಿಶಿಪ್ ನೇರ ಸಂದರ್ಶನಕ್ಕೆ ಆಗಮಿಸಿದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿದರು.

ಬೆಳಗಾವಿ ವಿಭಾಗದ ಸಹಾಯಕ ಅಪ್ರೆಂಟಿಶಿಪ್ ಸಲಹೆಗಾರರು ಹಾಗೂ ಸಂಸ್ಥೆಯ ನೋಡಲ್ ಅಧಿಕಾರಿ/ಪ್ರಾಚಾರ್ಯರಾದ ಡಾ.ಮಲ್ಲೂರ ಬಸವರಾಜ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅಪ್ರೆಂಟಿಶಿಪ್ ಬಗ್ಗೆ ವಿವರವಾಗಿ ತಿಳಿಸಿದರು.

ತಾಲೂಕಾ ನೋಡಲ್ ಅಧಿಕಾರಿ ಎಲ್.ವಾಯ್. ತಳವಾರ, ಪ್ಲೇಸ್‌ಮೆಂಟ್ ಅಧಿಕಾರಿ ಬಡೆಸಾಬ್ ತೋಟದ, ಸಿಬ್ಬಂದಿಗಳಾದ ಭಾರತಿ ಸುಂಕದ, ವಾಣಿಶ್ರೀ ಕುಲಕರ್ಣಿ, ಸುನಿತಾ ಸಾಕೇನವರ, ಗಂಗಾಧರ ತಳವಾರ, ಮಹಮ್ಮದ ಅಲಿ ನಧಾಫ್, ಮತ್ತು ಜಿಲ್ಲೆಯ ಸರಕಾರಿ/ಅನುದಾನಿತ/ಖಾಸಗಿ ಐ.ಟಿ.ಐ. ಪ್ರಾಚಾರ್ಯರು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು. ನಾರಾಯಣ ಚಿತ್ರಗಾರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ನೇರ ಸಂದರ್ಶನದಲ್ಲಿ ಜಿಲ್ಲೆಯ ಒಟ್ಟು 189 ಅಭ್ಯರ್ಥಿಗಳಲ್ಲಿ 112 ಅಭ್ಯರ್ಥಿಗಳು ಅಪ್ರೆಂಟಿಶಿಪ್ (ಶಿಶಿಕ್ಷು) ತರಬೇತಿಗಾಗಿ ಆಯ್ಕೆಯಾಗಿದ್ದಾರೆ. 80 ವಿಧ್ಯಾರ್ಥಿಗಳು ಎರಡನೇ ವರ್ಷದ ಪರೀಕ್ಷಾ ನಂತರದ ಎರಡನೇ ಸುತ್ತಿಗೆ ಆಯ್ಕೆಯಾಗಿರುತ್ತಾರೆ ಎಂದು ನೋಡಲ್ ಅಧಿಕಾರಿ, ಪ್ರಾಚಾರ್ಯ ಡಾ.ಮಲ್ಲೂರ ಬಸವರಾಜ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜವಾಡೆಯಲ್ಲಿ ಸಂಭ್ರಮದ ಮೊಹರಂ ಹಬ್ಬ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದಲ್ಲಿ ಮೊಹರಂ ಹಬ್ಬದ ಪ್ರಯುಕ್ತ ವಿವಿಧ ಮಸೀದಿಗಳಲ್ಲಿ ಪ್ರತಿಷ್ಠಾಪಿಸಲ್ಪಟ್ಟ ದೇವರುಗಳನ್ನು ಕೊನೆಯ ದಿನವಾದ ಬುಧವಾರ ಸಹಸ್ರಾರು ಹಿಂದೂ-ಮುಸ್ಲಿಂ ಸದ್ಭಕ್ತರು ಸಂಭ್ರಮದಿಂದ ಮೆರವಣಿಗೆ ನಡೆಸುವ ಮೂಲಕ ಮೊಹರಂ ಹಬ್ಬಕ್ಕೆ ವಿದಾಯ ಹೇಳುವ ಮುನ್ನ, ಬೆಳಿಗ್ಗೆ ಇಲ್ಲಿನ ರಾಜವಾಡೆಯಲ್ಲಿ ಪರಸ್ಪರ ಬೇಟಿ ಮಾಡುವ ಮೂಲಕ ಸಂಭ್ರಮದ ಮೆರವಣಿಗೆ ನಡೆಸಿದರು.

ಮುಂಜಾನೆ ವಿವಿಧ ಮಸೀದಿಗಳಲ್ಲಿ ಪ್ರತಿಷ್ಠಾಪಿಸಿದ ದೇವರುಗಳನ್ನು ಹೊತ್ತು ಪರಸ್ಪರ ಭೇಟಿ ನೀಡುತ್ತಾ, ಇಲ್ಲಿನ ರಾಜವಾಡೆಯಲ್ಲಿ ಸೇರಿ ಭಕ್ತರಿಂದ ವಿಶೇಷ ಪೂಜೆಗೈದು ಪುನಃ ಮಸೀದಿಗಳಿಗೆ ತೆರಳಿದರು. ಸಂಜೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ದೇವರುಗಳನ್ನು ಹೊತ್ತುಕೊಂಡು ಮೆರವಣಿಗೆ ನಡೆಸಿ ಹೆಜ್ಜೆ ಕುಣಿತ, ಕೋಲಾಟ, ಬಾಜಿ ಭಜಂತ್ರಿಗಳೊಂದಿಗೆ ಸಂತಸ ಸಂಭ್ರಮದಿಂದ ಮೊಹರಂ ಹಬ್ಬವನ್ನು ಆಚರಿಸಿ, ಕೊನೆಗೆ ಹಬ್ಬಕ್ಕೆ ವಿದಾಯ ಹೇಳಿದರು.

## ಜಿಟಿ ಜಿಟಿ ಮಳೆಗೆ ಶಾಲಾ-ಮಕ್ಕಳ ಪರದಾಟ, ಆತಂಕದಲ್ಲಿ ರೈತ ಸಮುದಾಯ..!

# ಜಡಿ ಮಳೆಗೆ ಹೈರಾಣಾದ ಲಕ್ಷ್ಮೇಶ್ವರ





ಶುಕ್ರವಾರ ಸಂತೆ ದಿನ ತರಕಾರಿ ವ್ಯಾಪಾರಸ್ಥರು ವ್ಯಾಪಾರವಿಲ್ಲದೇ ನಷ್ಟ ಅನುಭವಿಸಿದರು.



ಕೊಳಚೆಯಿಂದ ಕೂಡಿದ ರಸ್ತೆಗಳು.






ಮಳೆಯಲ್ಲಿಯೇ ಕೊಡೆ ಹಿಡಿದು ಶಾಲೆಗೆ-ಶಾಲೆಯಿಂದ ಮನೆಯತ್ತ ಸಾಗಿದ ಮಕ್ಕಳು.



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಾರದಿಂದ ಸುರಿಯುತ್ತಿರುವ ಜಿಟಜಿಟ ಮಳೆಯಿಂದ ಒಂದೆಡೆ ಬೆಳೆಗಳಿಗೆ ರೋಗಬಾಧೆ, ಕೃಷಿ ಚಟುವಟಿಕೆಗಳಿಗೆ ಅಡ್ಡಿಯಾದರೆ ಮತ್ತೊಂದೆಡೆ ಜನಜೀವನ ಅಸ್ತವ್ಯಸ್ಥತೆಗೆ ಕಾರಣವಾಗಿದೆ. ಶುಕ್ರವಾರ ಬೆಳಿಗ್ಗೆಯಿಂದ ರಾತ್ರಿವರೆಗೂ ಜಡಿ ಮಳೆಗೆ ಜನ ಹೈರಾಣಾಗಿದ್ದು, ಸಂತೆ ದಿನವಾಗಿದ್ದರಿಂದ ವ್ಯಾಪಾರ-ವಹಿವಾಟು ಸಂಪೂರ್ಣ ಅಸ್ತವ್ಯಸ್ಥಗೊಂಡಿತು. ಶಾಲಾ ಮಕ್ಕಳು, ವ್ಯಾಪಾರಕ್ಕಾಗಿ ಬಂದಿದ್ದ ಗ್ರಾಮೀಣ ಜನರು ಜಡಿ ಮಳೆ, ಕೆಸರು ರಸ್ತೆಯಲ್ಲಿ ಪರದಾಡಿದರು.

ಜಿಟಿಜಿಟಿ ಮಳೆ, ಮೋಡಕವಿದ ವಾತಾವರಣದಿಂದ ಬೆಳೆಗಳಿಗೆ ಕೀಟಗಳ ಹಾವಳಿ, ಹಳದಿರೋಗ ಬಾಧೆ ಬೆಳೆಗಳ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಮಳೆ ಬಿಡುವು ನೀಡದ್ದರಿಂದ ಕಳೆ, ಕೀಟ ನಿಯಂತ್ರಣ, ಎಡೆ ಹೊಡೆಯುವುದು, ಗೊಬ್ಬರ ಹಾಕುವ ಕಾರ್ಯ ಸ್ಥಗಿತಗೊಂಡು ಬೆಳೆ ಹಾಳಾಗುತ್ತಿವೆ. ಪ್ರಸಕ್ತ ವರ್ಷದಲ್ಲಿ ದೊಡ್ಡ ಮಳೆಯೇ ಆಗಿಲ್ಲ. ದೊಡ್ಡ ಮಳೆಯಾದರೆ ಉತ್ತಮ ಫಸಲು ಬರುತ್ತದೆ ಮತ್ತು ರೋಗರುಜಿನಗಳ ಬಾಧೆಗೆ ತುತ್ತಾಗುವುದಿಲ್ಲ. ಕೆರೆ, ಬಾವಿ, ಕೃಷಿ ಹೊಂಡ, ಬಾಂದಾರಗಳು ತುಂಬುತ್ತವೆ, ಹಳ್ಳ, ನದಿಗಳು ಹರಿದರೆ, ಅಂತರ್ಜಲ ಮಟ್ಟ ಹೆಚ್ಚಿ ರೈತ ಮತ್ತು ಜನಸಮುದಾಯ ನಿಶ್ಚಿಂತರಾಗುತ್ತಾರೆ.

### ರಸ್ತೆಗಳ ಸ್ಥಿತಿ ಅಯೋಮಯ

ಜಾನುವಾರುಗಳನ್ನು ಮೇಯಿಸಲು ಮತ್ತು ಹೊರಗಡೆ ಕಟ್ಟಲೂ ಆಗದಂತಹ ಪರಿಸ್ಥಿತಿಯಿಂದಾಗಿ ರೈತರು ಪರದಾಡುವಂತಾಗಿದೆ. ಕುರಿಗಾಯಿಗಳಿಗೂ ಸಮಸ್ಯೆಯಯಾಗಿದೆ. ಮನೆಗಳ ಮೇಲೆ ಪ್ಲಾಸ್ಟಿಕ್ ಹೊದಿಕೆ ಹಾಕುತ್ತಿದ್ದಾರೆ. ಪಟ್ಟಣ ಸೇರಿ ತಾಲೂಕಿನ ಬಹುತೇಕ ರಸ್ತೆಗಳು ಸಂಪೂರ್ಣ ಹಾಳಾಗಿದ್ದು ಸಂಚಾರ ದುಸ್ಥರವಾಗಿದೆ. ಲಕ್ಷ್ಮೇಶ್ವರ-ಆದ್ರಳ್ಳಿ, ಲಕ್ಷ್ಮೇಶ್ವರ- ದೇವಿಹಾಳ, ಸೂರಣಗಿ-ಬೆಳ್ಳಟ್ಟಿ, ದೊಡ್ಡೂರ, ಬಾಲೆಹೊಸೂರ, ಯತ್ತಿನಹಳ್ಳಿ, ಯಳವತ್ತಿ ಸಂಪರ್ಕಿಸುವ ರಸ್ತೆ ಸೇರಿ ಗ್ರಾಮೀಣ ಪ್ರದೇಶಗಳ ಮತ್ತು ರೈತ ಸಂಪರ್ಕ ರಸ್ತೆಗಳು ಸಂಪೂರ್ಣ ಹಾಳಾಗಿವೆ.

ರಸ್ತೆಗಳಲ್ಲಿ ಕೆಸರು ನಿರ್ಮಾಣವಾಗಿ ವೃದ್ಧರು, ಮಕ್ಕಳು ಹೊರ ಬರಲಾರದಂತಹ ಸ್ಥಿತಿ ನಿರ್ಮಾಣವಾಗಿದೆ. ಬಿಸಿಲೇ ಬೀಳದ್ದರಿಂದ ಬಟ್ಟೆಬರೆಗಳನ್ನು ಒಣಗಿಸಲು ಜನತೆ ಪರದಾಡುವಂತಾಗಿದೆ. ಶಾಲಾ ಮಕ್ಕಳು ಮಳೆಯಲ್ಲಿಯೇ ನೆನೆದು ಸಾಗುವಂತಾಗಿದೆ. ಶಾಲೆಗಳಲ್ಲಿ ಮಕ್ಕಳನ್ನು ಆಟಕ್ಕೆ ಹೊರಗಡೆ ಬಿಡದಂತಹ ಸ್ಥಿತಿ ನಿರ್ಮಾಣವಾಗಿದೆ. ಮಳೆಯ ಜತೆಗೆ ತಂಪಾದ ಗಾಳಿ ಬೀಸುತ್ತಿದ್ದು ಮಕ್ಕಳು ಸೇರಿ ಎಲ್ಲ ವಯಸ್ಸಿನವರೂ ಹಗಲೆಲ್ಲ ಸ್ವೆಟರ್, ಜರ್ಕಿನ್, ಉಣ್ಣೆ ಬಟ್ಟೆಗೆ ಮೊರೆ ಹೋಗಿದ್ದಾರೆ. ಆಸ್ಪತ್ರೆಗಳಲ್ಲಿ ರೋಗಿಗಳ ಸಂಖ್ಯೆ ಹೆಚ್ಚುತ್ತಿದೆ.

ಗ್ರಾಮೀಣ ಪ್ರದೇಶಗಳ ರಸ್ತೆ ಹಾಳಾಗಿದ್ದರಿಂದ ಸಾರಿಗೆ ಬಸ್ಸುಗಳ ಸಂಚಾರಕ್ಕೆ ಸಂಚಕಾರ ಬಂದಿದೆ. ಇನ್ನೂ 2 ದಿನ ಇದೇ ರೀತಿ ಮಳೆಯ ವಾತಾವರಣ ಮುಂದುವರೆಯಲಿದೆ ಎಂಬ ಮಾತು ಜನತೆಯನ್ನು ಚಿಂತೆಗೀಡು ಮಾಡಿದೆ.

**ಬಿ.ಜಿ.ಅಣ್ಣಿಗೇರಿ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರಕ್ಕೆ ಚಾಲನೆ**

# ಗುರುಕುಲಾಶ್ರಮದಿಂದ ನಿತ್ಯ 'ಅಕ್ಷರ ದಾಸೋಹ'



■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳು ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆ ಅಮೋಘವಾದದ್ದು. ಗುರುಕುಲ ಮಾದರಿಯ ಆಶ್ರಮದಲ್ಲಿ ಇಂದಿಗೂ ನಿತ್ಯ ಅನುಭವಿಕ ಶಿಕ್ಷಕ ತಂಡದಿಂದ 'ಅಕ್ಷರ ದಾಸೋಹ' ನಡೆದಿರುವದು ಅಭಿನಂದನೀಯ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವ್ಹಿ.ವ್ಹಿ. ನಡುವಿನಮನಿ ಹೇಳಿದರು.

ಅವರು ಶುಕ್ರವಾರ ಗದಗ ತಾಲೂಕಿನ ಕಣವಿ ಗ್ರಾಮದ ಸರಕಾರಿ ಮಾಧ್ಯಮಿಕ ಶಾಲೆಯಲ್ಲಿ ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ಸರಣಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿದ್ದ ಅಣ್ಣಿಗೇರಿ ಗುರುಗಳು ಗದುಗಿನಲ್ಲಿ ತಾವಿದ್ದ ಕೊಠಡಿಯಲ್ಲಿ ಕೆಲವು ವಿದ್ಯಾರ್ಥಿಗಳಿಗೆ ಟ್ಯೂಶನ್ ಹೇಳುವ ಪರಿಪಾಠವಿಟ್ಟುಕೊಂಡವರು. ಈ ಟ್ಯೂಶನ್ ಹೇಳುವ ಸುದ್ದಿ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿ ಕಾಲಕ್ರಮೇಣ ಅದು ಗುರುಕುಲ ಮಾದರಿಯಲ್ಲಿ ಬೆಳೆದು ಬಂದು ಅವರ ತರುವಾಯ ಅವರ ಶಿಷ್ಯರು ಈ ಗುರುಕುಲವನ್ನು ಪ್ರಗತಿಪಥದಲ್ಲಿ ಮುನ್ನಡೆಸಿಕೊಂಡು ಬಂದಿರುವದು ಶ್ಲಾಘನೀಯ ಎಂದರು.

ಪ್ರತಿಭಾನ್ವಿತ ವಿದ್ಯಾರ್ಥಿಗಳಿದ್ದಲ್ಲಿಯೇ ಬಂದು ಪ್ರತಿಭಾನ್ವಿತರಿಗೆ ಪ್ರತಿಷ್ಠಾನವು ಪುರಸ್ಕರಿಸುತ್ತಿರುವದು ಇತರ ವಿದ್ಯಾರ್ಥಿಗಳಿಗೆ ಸ್ಫೂರ್ತಿ, ಪ್ರೇರಣೆ ನೀಡಿದಂತಾಗಿದೆ. ಅಣ್ಣಿಗೇರಿ ಗುರುಗಳ ಗುರುಕುಲ ಆಶ್ರಮದಲ್ಲಿ ನಡೆಯುತ್ತಿರುವ ಅಕ್ಷರ ದಾಸೋಹ-ಜ್ಞಾನ ದಾಸೋಹ ನಿತ್ಯ ನಿರಂತರವಾಗಿರಲಿ ಎಂದರು.

ಮುಖ್ಯ ಅತಿಥಿಗಳಾಗಿ ಜಿಮ್ಸ್ ವೈದ್ಯಾಧಿಕಾರಿ ಡಾ. ಜಿ.ಎಸ್. ಪಲ್ಲೇದ, ಡೈಟ್ ಉಪನ್ಯಾಸಕ ಶಂಕರ ಹಡಗಲಿ, ಯಲ್ಲಪ್ಪ ಕಲ್ಯಾಣಿ, ಬಸಪ್ಪ ಸೋಗಿ ಆಗಮಿಸಿದ್ದರು. ಅಧ್ಯಕ್ಷತೆ ವಹಿಸಿದ್ದ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಮಾತನಾಡಿ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡುವ ಮೂಲಕ ಇತರ ವಿದ್ಯಾರ್ಥಿಗಳಿಗೆ ಸ್ಫೂರ್ತಿ ನೀಡಲು ಆಯಾ ಶಾಲೆಗೆ ತೆರಳಿ ಪ್ರತಿಭೆಗಳನ್ನು ಗೌರವಿಸಲು ಪ್ರತಿಷ್ಠಾನ ಮುಂದಾಗಿದೆ ಎಂದರು.

ಪ್ರತಿಷ್ಠಾನದ ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ, ಕಾರ್ಯದರ್ಶಿ ಶಿವಪ್ಪ ಕತ್ತಿ, ಖಜಾಂಚಿ ಸಿದ್ಧಲಿಂಗನಗೌಡ ಪಾಟೀಲ, ನಿರ್ದೇಶಕರಾದ ಶಿವಾನಂದ ದಂಡಿನ, ವಿರುಪಾಕ್ಷಪ್ಪ ಮ್ಯಾಗೇರಿ, ಚನ್ನಪ್ಪ ಮಲ್ಲಾಡದ, ತೋಂಟೇಶ ವೀರಲಿಂಗಯ್ಯನಮಠ, ವಿರುಪಾಕ್ಷಪ್ಪ ಶಾಂತಗೇರಿ, ಕಳಕಪ್ಪ ಕುರ್ತಕೋಟಿ ಪಾಲ್ಗೊಂಡಿದ್ದರು.

ಪ್ರಾರಂಭದಲ್ಲಿ ಎಸ್.ಜಿ. ಮೂಲಿಮನಿ ಸ್ವಾಗತಿಸಿದರು, ಎಂ.ಎಸ್. ಗಾರವಾಡ ಪ್ರಾಸ್ತಾವಿಕವಾಗಿ ಮಾತನಾಡದರು. ಕೊನೆಗೆ ಜಿ.ಎನ್. ಮುದ್ದಿಕೋಲ ವಂದಿಸಿದರು. ಪ್ರವೀಣ ಮಾಯಣ್ಣವರ, ರೋಹಿಣಿ ಅರಗಂಜಿ, ವಿಜಯ ಮಜ್ಜಿಗುಡ್ಡ, ಶಿವರಾಜ ಗಾಜಿ, ನೀಲಮ್ಮ ಹಳ್ಳಿಕೇರಿ, ಉಮಾ ಕೋರಿ ಇವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಗದಗ ತಾಲೂಕಿನ ಮುಳಗುಂದ ಪಟ್ಟಣದ ಸರಕಾರಿ ಉರ್ದು ಪ್ರೌಢಶಾಲೆಯಲ್ಲಿ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಸುಹಾನಾ ದಾದಪ್ಪನವರ, ತಬಸೂಮ್ ಗುಂಜಳ, ಸಾನಿಯಾ ಕಿಚಡಿ, ಶಾಹೀನ್ ಶೇಖ ಹಾಗೂ ತಸ್ಲೀಮ್ ಮುಜಾವರ ಅವರಿಗೆ ಪುರಸ್ಕಾರ ನೀಡಿ ಗೌರವಿಸಲಾಯಿತು.

ಪ್ರತಿಭಾ ಪುರಸ್ಕಾರ ತಂಡದವರಲ್ಲದೆ ಶಾಲೆಯ ಎಸ್.ಜಿ. ಉಮರ್ಜಿ, ಎನ್.ಎನ್. ಪಿಂಜಾರ, ಎಸ್.ಎಂ. ನೆಗಳೂರ, ಜಿ.ಎಂ. ಫಿರಂಗಿ, ನೇಹಾ ಖಟವಟೆ, ತಾಯಮ್ಮ ಮುಂತಾದವರು ಪಾಲ್ಗೊಂಡಿದ್ದರು. ಮುಳಗುಂದದ ,ಒರಾರ್ಜಿ ವಸತಿ ಶಾಲೆಯಲ್ಲೂ ಪ್ರತಿಭಾ ಪುರಸ್ಕಾರ ನೀಡಲಾಯಿತು.

**ಇಂದಿನ ಪ್ರತಿಭಾ ಪುರಸ್ಕಾರ**

ಜುಲೈ 20ರಂದು ಮುಂಜಾನೆ 8 ಗಂಟೆಗೆ ಹೊಂಬಳ ಗ್ರಾಮದ ಸರಕಾರಿ ಶಾಲೆ, ಮುಂಜಾನೆ 9 ಗಂಟೆಗೆ ಲಿಂಗದಾಳ ಸರಕಾರಿ ಶಾಲೆ, ಮುಂಜಾನೆ 10 ಗಂಟೆಗೆ ಕದಡಿಯ ಸರಕಾರಿ ಶಾಲೆಯಲ್ಲಿ ಪ್ರತಿಭಾ ಪುರಸ್ಕಾರ ನಡೆಯಲಿದೆ ಎಂದು ಪ್ರತಿಷ್ಠಾನದ ಪ್ರಕಟಣೆ ತಿಳಿಸಿದೆ.

---

**ಕೊಳಗೇರಿ ಜನರ ವಿರೋಧಿ ಗದಗ ಸ್ಲಂ ಬೋರ್ಡ್ ಅಧಿಕಾರಿಯ ಮೇಲೆ ಕ್ರಮಕ್ಕೆ ಆಗ್ರಹ**

## ಸ್ಲಂ ನಿವಾಸಿಗಳಿಂದ ಪತ್ರ ಚಳುವಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಪ್ರಧಾನಮಂತ್ರಿ ಆವಾಸ್ ವಸತಿ ಯೋಜನೆಡಿಯಲ್ಲಿ ನಡೆಯುತ್ತಿರುವ ಕಳಪೆ ಕಾಮಗಾರಿ ಹಾಗೂ ಭ್ರಷ್ಟಾಚಾರದ ತನಿಖೆಗೆ ನಡೆಸಬೇಕು ಹಾಗೂ ಸ್ಲಂ ಬೋರ್ಡ್ ಅಧಿಕಾರಿಯ ಅಮಾನತು ಮಾಡಬೇಕೆಂದು ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯ ಸಹಕಾರದಲ್ಲಿ ನೂರಾರು ಸ್ಲಂ ನಿವಾಸಿಗಳಿಂದ ಬಹಿರಂಗ ಪತ್ರ ಚಳುವಳಿ ನಡೆಸಿ ರಾಜ್ಯ ವಸತಿ ಇಲಾಖೆ ಸಚಿವ ಬಿ.ಝಡ್. ಜಮೀರಅಹ್ಮದ ಖಾನ ಅವರಿಗೆ ಒತ್ತಾಯಿಸಿದರು.

ಸ್ಲಂ ಜನಾಂದೋಲನ ಕರ್ನಾಟಕ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಸ್ಲಂ ಜನರ ಹಣದಲ್ಲಿ ಸ್ಲಂ ಬೋರ್ಡ್ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಭ್ರಷ್ಟಾಚಾರ ನಡೆಸುತ್ತಿದ್ದಾರೆ. ಗದಗ-ಬೆಟಗೇರಿ ಅವಳಿ ನಗರದ ವಿವಿಧ ಅಘೋಷಿತ ಗುಡಿಸಲು ಪ್ರದೇಶಗಳನ್ನು ಸ್ಲಂ ಕಾಯ್ದೆ ಪ್ರಕಾರ ಘೋಷಣೆ ಮಾಡಲು ಸ್ಲಂ ಬೋರ್ಡ್ ಕಚೇರಿಗೆ ಸ್ಲಂ ನಿವಾಸಿಗಳ ದಾಖಲೆಗಳನ್ನು ಸಲ್ಲಿಸಿ ಎರಡು ವರ್ಷಗಳು ಕಳೆದರೂ ಸಹ ಈವರೆಗೂ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಗುಡಿಸಲು ಪ್ರದೇಶಗಳನ್ನು ಸ್ಲಂ ಘೋಷಣೆ ಮಾಡಿ ಅಭಿವೃದ್ಧಿಗೆ ಸಹಕರಿಸಬೇಕಾದ ಅಧಿಕಾರಿಗಳು ಕೊಳಗೇರಿ ಜನರ ಸಮಸ್ಯಗಳಿಗೆ ಸ್ಪಂದಿಸುವುದನ್ನು ಬಿಟ್ಟು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಗದಗ ಜಿಲ್ಲಾ ಸ್ಲಂ ಸಮಿತಿ ಇಂತಹ ಭ್ರಷ್ಟ ಹಾಗೂ ಸ್ಲಂ ಜನರ ವಿರೋಧಿ ಅಧಿಕಾರಿಯನ್ನು ಅಮಾನತು ಮಾಡಬೇಕೆಂದು ನಿರಂತರ ಹೋರಾಟಗಳು ನಡೆಸಿ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರೂ ಸಹ ಅಧಿಕಾರಿಯ ಮೇಲೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ವಸತಿ ಸಚಿವರಿಗೆ, ವಸತಿ ಇಲಾಖೆ ಪ್ರಧಾನ ಕಾರ್ಯದರ್ಶಿಗಳಿಗೆ ಹಾಗೂ ಸ್ಲಂ ಬೋರ್ಡ್ ಆಯುಕ್ತರಿಗೆ ಸಾಮೂಹಿಕವಾಗಿ ಪತ್ರ ಕಳುಹಿಸಿ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲು ಒತ್ತಾಯಿಸಿದರು. ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ರವಿಕುಮಾರ ಬೆಳಮಕರ, ಕಾರ್ಯದರ್ಶಿ ಅಶೋಕ ಕುಸಬಿ, ಮುಖಂಡರಾದ ಇಬ್ರಾಹಿಮ ಮುಲ್ಲಾ, ಮಂಜುನಾಥ ಶ್ರೀಗಿರಿ, ಮೌಲಾಸಾಬ ಗಚ್ಚಿ, ಮಹಿಳಾ ಸಮಿತಿ ಸಂಚಾಲಕಿ ಮೆಹರುನಿಸಾ ಢಾಲಾಯತ, ಮೈಮುನ ಬೈರಕದಾರ, ಪ್ರೇಮಾ ಮಣವಡ್ಡರ, ಸುಶೀಲಮ್ಮ ಗೊಂದಾರ, ಮೆಹಬೂಬಸಾಬ ಬಳ್ಳಾರಿ, ಸಾಕ್ರುಬಾಯಿ ಗೋಸಾವಿ, ಖಾಜೇಸಾಬ ಇಸ್ಮಾಯಿಲನವರ, ಮಕ್ತುಮಸಾಬ ಮುಲ್ಲಾನವರ, ಮಲೇಶಪ್ಪ ಕಲಾಲ, ಮೆಹರುನಿಸಾ ಡಂಬಳ, ಚಂದ್ರಪ್ಪ ಲಕ್ಕುಂಡಿ, ಜಂದಿಸಾಬ ಬಳ್ಳಾರಿ, ದುರ್ಗಪ್ಪ ಮಣವಡ್ಡರ, ಶರಣಪ್ಪ ಬಿಂಗದಕಟ್ಟಿ, ಈರಮ್ಮ ಬೇವಿನಮರದ, ನಾಗರಾಜ ಮಣವಡ್ಡರ, ಶಿವಾನಂದ ಶಿಗ್ಲಿ, ರಾಜೇಸಾಬ ಸೈಯದ, ಮಂಜುನಾಥ ಒಂಟಿಯಲಿ ಹಾಗೂ ಗದಗ-ಬೆಟಗೇರಿ ನಗರದ ವಿವಿಧ ಸ್ಲಂ ಪ್ರದೇಶದ ನೂರಾರು ಸ್ಲಂ ನಿವಾಸಿಗಳು ಪತ್ರ ಚಳುವಳಿಯಲ್ಲಿ ಭಾಗವಹಿಸಿದರು.

---

## ಜಿಲ್ಲಾಡಳಿತದಿಂದ ಅದ್ಧೂರಿ ಸ್ವಾತಂತ್ರ್ಯೋತ್ಸವಕ್ಕೆ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ




ಪ್ರಸಕ್ತ ಸಾಲಿನ 77ನೇ ಸ್ವಾತಂತ್ರ್ಯೋತ್ಸವನ್ನು ನಗರದ ಆರ್.ಎನ್. ಶೆಟ್ಟಿ ಕ್ರೀಡಾಂಗಣದಲ್ಲಿ ವಿಜೃಂಭಣೆಯಿಂದ ಆಚರಿಸುವ ಹಿನ್ನೆಲೆಯಲ್ಲಿ ಧಾರವಾಡ ನಗರದ ಎಲ್ಲ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಕಡ್ಡಾಯವಾಗಿ ಪಾಲ್ಗೊಳ್ಳಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಗುರುವಾರ ಜರುಗಿದ ಸ್ವಾತಂತ್ರ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಾ, 77ನೇ ಸ್ವಾತಂತ್ರ್ಯೋತ್ಸವವನ್ನು ವಿಜೃಂಭಣೆಯಿಂದ, ವಿಶೇಷ ರೀತಿಯಲ್ಲಿ ಆಚರಿಸಲು ಈ ಬಾರಿ ನಿರ್ಧರಿಸಲಾಗಿದ್ದು, ನಗರದ ಎಲ್ಲ ಶಾಲಾ-ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿರಲು ಕ್ರಮ ಕೈಗೊಳ್ಳುವಂತೆ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ಈಗಾಗಲೇ ಈ ಸಾಲಿನ ಸ್ವಾತಂತ್ರ್ಯ ದಿನಾಚರಣೆಯನ್ನು ವಿಜೃಂಭಣೆಯಿಂದ ನಡೆಸುವಂತೆ ಸೂಚಿಸಿದ ಹಿನ್ನೆಲೆಯಲ್ಲಿ ಅನೇಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದರು.

ಈ ಬಾರಿ ಜಿಲ್ಲೆಯ ಕಾಲೇಜುಗಳಲ್ಲಿ 77 ವಿಶೇಷ ಉಪನ್ಯಾಸಗಳನ್ನು ಆಯೋಜಿಸಲಾಗುವುದು. ಆಗಸ್ಟ್ 1ರಿಂದ 14ರವರೆಗೆ 15 ದಿನಗಳ ಕಾಲ ಸ್ವಾತಂತ್ರ್ಯ ಸಂಗ್ರಾಮ, ಇತಿಹಾಸ, ಜನಪದ ಕುರಿತು ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಪೊಲೀಸ್ ಹಾಗೂ ವಿವಿಧ ಇಲಾಖೆಗಳಿಂದ, ಶಾಲಾ-ಕಾಲೇಜುಗಳಿಂದ ಉತ್ತಮ ಪರೇಡ್ ನಡೆಸಲಾಗುವುದೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ವೇದಿಕೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ, ಪೊಲೀಸ್ ಉಪ ಆಯುಕ್ತರಾದ ಮಹಾನಿಂಗ ನಂದಗಾವಿ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ಧನಗೌಡ, ಡಿಡಿಪಿಐ ಎಸ್.ಎಸ್. ಕೆಳದಿಮಠ, ಡಿಡಿಪಿಯು ಸುರೇಶ ಕೆ.ಪಿ. ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತಿರಿದ್ದರು.

---

## ಪಿಂಜಾರ/ನದಾಫ್ ಅಭಿವೃದ್ಧಿ ನಿಗಮಕ್ಕೆ ಅನುದಾನ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯಾದ್ಯಂತ ಸುಮಾರು 22ರಿಂದ 25 ಲಕ್ಷ ಜನಸಂಖ್ಯೆ ಹೊಂದಿರುವ ನದಾಫ್/ಪಿಂಜಾರ ಜನಾಂಗವು ಸಾಮಾಜಿಕ, ಶೈಕ್ಷಣಿಕ, ಸಾಂಸ್ಕೃತಿಕ, ಔದ್ಯೋಗಿಕ, ರಾಜಕೀಯ ಹಾಗೂ ಹಲವಾರು ರಂಗಗಳಲ್ಲಿ ಅತ್ಯಂತ ಹಿಂದುಳಿದ ಶೋಷಿತ ಸಮಾಜವಾಗಿದೆ. ಈ ಜನಾಂಗ ಇಸ್ಲಾಂ ಧರ್ಮದ ಮುಸ್ಲಿಂ (ಅಲ್ಪಸಂಖ್ಯಾತರ) ಪಂಗಡದಲ್ಲಿದ್ದು ಹಿಂದುಳಿದ ವರ್ಗಗಳ ಇಲಾಖೆಗೆ ಸಂಬಂಧಿಸಿದ ನದಾಫ್/ಪಿಂಜಾರ್ ಉಪಜಾತಿಯ ಪ್ರವರ್ಗ-1ರ ಮೀಸಲಾತಿಯನ್ನು ಹೊಂದಿದೆ.

ಇಲ್ಲಿಯವರೆಗೂ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಮತ್ತು ಇತರ ಯೋಜನೆಗಳಿಂದ ಸೌಲಭ್ಯಗಳನ್ನು ಪಡೆದುಕೊಳ್ಳಲು ಸರಕಾರದ ನಿರ್ದೇಶನ ಇದ್ದರೂ, ಸತತ ತಾಂತ್ರಿಕ ದೋಷಗಳಿಂದ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯ ಯಾವದೇ ಯೋಜನೆಗಳು ಸರಿಯಾಗಿ ತಲುಪದೇ ವಂಚಿತರಾಗಿದ್ದೇವೆ. ಇದರ ನಿವಾರಣೆಗಾಗಿ ಹಲವಾರು ವರುಷಗಳಿಂದ ಹೋರಾಟ ಮಾಡಿದ ಫಲವಾಗಿ ಹಿಂದಿನ ಸರಕಾರ ಮಾರ್ಚ್ 2023ಕ್ಕೆ ಪ್ರತ್ಯೇಕವಾಗಿ 'ಪಿಂಜಾರ/ನದಾಫ್ ಅಭಿವೃದ್ಧಿ ನಿಗಮ'ದ ಆದೇಶ ಮಾಡಿ, ಘೋಷಣೆ ಮಾಡಿದೆ.

ಹೊಸ ಸರಕಾರ ಬಂದ ನಂತರ ಸಮಾಜದ ಹಿತದೃಷ್ಟಿಯಿಂದ ಅನುದಾನ ನೀಡಬೇಕೆಂದು ಮುಖ್ಯಮಂತ್ರಿಗಳಿಗೆ, ಸಚಿವರುಗಳಿಗೆ ಮನವಿ ನೀಡಿದರೂ ಸರಕಾರ ಸ್ಪಂದಿಸುತ್ತಿಲ್ಲ. ಈ ಕುರಿತು ಸಾರ್ವಜನಿಕವಾಗಿ ಸರಕಾರದ ಗಮನ ಸೆಳೆಯಲು ಜುಲೈ 22ರಂದು ರಾಜ್ಯಾದ್ಯಂತ ಏಕಕಾಲದಲ್ಲಿ ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಮುಖ್ಯಮಂತ್ರಿಗಳಿಗೆ ಮನವಿ ನೀಡಲಾಗುವುದೆಂದು ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎಫ್. ಹಳ್ಯಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

**ಗದಗ ಸಾಯಿಬಾಬಾ ಮಂದಿರದಲ್ಲಿ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ-6**

## ಸ್ಮರಿಸುವ ಭಕ್ತರಲ್ಲಿ ಬಾಬಾ ನೆಲೆಸಿರುತ್ತಾನೆ

■ವಿಜಯಸಾಕ್ಷಿ ಸುದ್ದಿ, ಗದಗ




ಜ್ಞಾನಿಗಳು ಭಕ್ತರಿಗೆ ಅಜ್ಞಾನದ ಪರದೆಯನ್ನು ಸರಿಸಿ ಜ್ಞಾನ ನೀಡುವರು. ಸರ್ವಾಂತರಯಾಮಿಯಾದ ಬಾಬಾ ಅವರು ಎಲ್ಲೆಡೆಯೂ ಯಾವ ರೂಪದಲ್ಲಾದರೂ ಭಕ್ತರಿಗೆ ಮಾರ್ಗದರ್ಶನ ನೀಡುತ್ತಿದ್ದರು. ನನ್ನನ್ನು ಸ್ಮರಿಸುವವರ ಬಳಿ ಸದಾ ಇರುತ್ತೇನೆ ಎಂದೆನ್ನುತ್ತಿದ್ದರು ಸಾಯಿಬಾಬಾ ಎಂದು ಗದುಗಿನ ಆಧ್ಯಾತ್ಮಿಕ ಚಿಂತಕ, ತಜ್ಞ ವೈದ್ಯರಾದ ಡಾ. ಎಸ್.ಬಿ. ಶೆಟ್ಟರ ಹೇಳಿದರು.

ಅವರು ಗದುಗಿನ ಸಾಯಿಬಾಬಾ ಮಂದಿರದಲ್ಲಿ ಗುರುಪೂರ್ಣಿಮೆ ಅಂಗವಾಗಿ ಗದಗ-ಬೆಟಗೇರಿಯ ಶ್ರೀ ಸಾಯಿಬಾಬಾ ಸತ್ಸಂಗ ಏರ್ಪಡಿಸಿದ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ-6ರಲ್ಲಿ ಪ್ರವಚನ ನೀಡಿ ಮಾತನಾಡಿದರು.

ಆಧ್ಯಾತ್ಮಿಕ ವಿಚಾರದಲ್ಲಿ ಪ್ರಗತಿ ಹೊಂದಲು ಸಾಯಿಬಾಬಾ ಅವರ ಮಹಿಮೆ, ಬಾಬಾ ಅವರ ಬದುಕನ್ನು ಭಕ್ತರು ಅಧ್ಯಯನಶೀಲರಾಗಿ ಓದಿ ಮನನ ಮಾಡಿಕೊಳ್ಳಬೇಕಿದೆ. ಧರ್ಮ ಗುಣ, ದಾನ ಗುಣವನ್ನು ಬೆಳೆಸಿಕೊಳ್ಳಬೇಕು. ಬಿತ್ತಿದ್ದನ್ನು ಬೆಳೆದುಕೊಳ್ಳಬೇಕು ಎಂಬ ಮಾತಿನಂತೆ ಒಳ್ಳೆಯದನ್ನು ಕೇಳಬೇಕು, ಒಳ್ಳೆಯದನ್ನು ಮಾಡಬೇಕು. ಅಂದಾಗ ಒಳ್ಳೆಯದಾಗುವದು ಎಂದರು.

ಕಲಬುರ್ಗಿಯ ಶರಣಬಸಪ್ಪ ಅವರು ದಾಸೋಹಕ್ಕೆ ಹೆಸರಾಗಿದ್ದರು. ದಾಸೋಹ ಜೀವಿಗಳಾಗಿದ್ದ ಅವರು ಸಕಲ ಪ್ರಾಣಿ ಪಕ್ಷಿಗಳಿಗೆ ಆಹಾರ ಧಾನ್ಯ, ನೀರಿನ ವ್ಯವಸ್ಥೆ ಮಾಡುವ ಮೂಲಕ ಸಕಲ ಪ್ರಾಣಿ ಪಕ್ಷಿಗಳಲ್ಲಿ ದೇವರ ಸ್ವರೂಪವನ್ನು ಕಂಡವರು. ಅಂತೆಯೇ ಅವರ ಹೊಲಗದ್ದೆಗಳಲ್ಲಿ ದವಸ ಧಾನ್ಯ ಹುಲುಸಾಗಿ ಬೆಳೆದು ಬಂದಿರುವದನ್ನು ಪುರಾಣ, ಪುಣ್ಯಕಥೆಗಳಿಂದ ತಿಳಿದಿದ್ದೇವೆ. ಹಾಗೆಯೇ ಬಾಬಾ ಅವರೂ ಕೂಡ ಸಕಲ ಪ್ರಾಣಿಗಳಿಗೆ ಲೇಸನ್ನು ಬಯಸಿದವರು ಎಂದು ಬಣ್ಣಿಸಿದರು.

ಧುನಿ ನಿರ್ಮಾಣಕ್ಕೆ ದೇಣಿಗೆ ನೀಡಿದ ಅಶೋಕ ಶೇಖರಪ್ಪ ಹಾದಿ ಪರಿವಾರ, ಪ್ರವಚನದ ಪ್ರಸಾದ ಸೇವೆ ವಹಿಸಿಕೊಂಡಿದ್ದ ಅಶ್ವಥ್ ಸುಲಾಖೆ, ಜಿ.ಬಿ. ಅಬ್ಬಿಗೇರಿ, ಮಲ್ಲಿಕಾರ್ಜುನ ಸರ್ವಿ, ತಿಪ್ಪಣ್ಣ ಮಡಿವಾಳರ, ಬಸವಣ್ಣೆಮ್ಮ ಬಸವರಾಜ ಗಣಾಚಾರಿ, ಮಧುಶ್ರೀ ಮಹಾಂತಸ್ವಾಮಿ ಪೂಜಾರ ಪರಿವಾರದವರಿಗೆ ಅಲ್ಲದೆ ಸಹಕಾರ ನೀಡಿದ ಎಸ್.ಬಿ. ಮಾಂಡ್ರೆ, ಶಬ್ಬೀರ ರಾಜೇಸಾಬ ಮುಲ್ಲಾ, ಮಲ್ಲಪ್ಪ ಕಿಂದರಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ಸಮಿತಿಯ ಅಧ್ಯಕ್ಷ ಮಹೇಶ ತಲೇಗೌಡ್ರ ಸ್ವಾಗತಿಸಿದರು. ಕಾರ್ಯದರ್ಶಿ ರವಿ ಚಿಂಚಲಿ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಸಮಿತಿಯ ಪದಾಧಿಕಾರಿಗಳು, ಸದಸ್ಯರು, ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಬಾಬಾ ಅವರ ತಮ್ಮ ಕೊನೆಯ ದಿನಗಳನ್ನು ಭಕ್ತರಿಗೆ ತಿಳಿಸಿದ ಬಗೆಯನ್ನು ಹಾಗೂ ಅವರ ಸಮಾಧಿ ನಿರ್ಮಾಣ, ಶಿರಡಿ ಸುಕ್ಷೇತ್ರವಾಗಿ ಬೃಹದಾಕಾರವಾಗಿ ಅಭಿವೃದ್ಧಿ ಹೊಂದಿ ಭಕ್ತ ಸಮೂಹವನ್ನು ಉದ್ಧರಿಸಿದ ಬಗೆಯನ್ನು ಡಾ.ಶೆಟ್ಟರ ವಿಶ್ಲೇಷಿಸಿದರು.

---

## ಶಾರದಾ ಸಂಗೀತ ಗುರುಕುಲದ ವಾರ್ಷಿಕೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶಾರದಾ ಸಂಗೀತ ಗುರುಕುಲದ 13ನೇ ವಾರ್ಷಿಕೋತ್ಸವ, ಗುರುಪೂರ್ಣಿಮೆ ಹಾಗೂ ಸಂಗೀತೋತ್ಸವ ಕಾರ್ಯಕ್ರಮವು ಜು. 20ರಂದು ಸಂಜೆ 4ಗಂಟೆಗೆ ಎಪಿಎಂಸಿಯಲ್ಲಿನ ಸ್ಟೇಟ್ ಬ್ಯಾಂಕ್ ಕಟ್ಟಡದ ವರ್ತಕರ ಸಭಾಭವನದಲ್ಲಿ ಜರುಗಲಿದೆ.

ಗಜೇಂದ್ರಗಡದ ಸತ್ಯನಾರಾಯಣ ತೈಲಂಗ ಕಾರ್ಯಕ್ರಮ ಉದ್ಘಾಟಿಸುವರು. ಕುಂದಗೋಳದ ಪಂ.ಅಶೋಕ ನಾಡಗೀರ, ಪರಶುರಾಮ ಭಜಂತ್ರಿ ಅವರಿಂದ ಗಾಯನ, ಉಸ್ತಾದ್ ಶಫೀಕ್‌ಖಾನ್ ಅವರಿಂದ ಸಿತಾರ ವಾದನ ಜರುಗಲಿದೆ. ಕೃಷ್ಣಕುಮಾರ ಕುಲಕರ್ಣಿ, ಭೀಮಾಶಂಕರ ಬಿದನೂರ ಅವರು ತಬಲಾ ಮತ್ತು ಪ್ರಕಾಶ ಹೆಗಡೆ ಹಾರ್ಮೋನಿಯಂ ಸಾಥ್ ನೀಡಲಿದ್ದಾರೆ.

ಗದಗ ಕೆವಿಜಿ ಬ್ಯಾಂಕ್ ವ್ಯವಸ್ಥಾಪಕ ಶ್ರೀಪಾದರಾಜ ಹೊಂಬಳ, ನಾಗರಾಜ ಹಣಗಿ, ದಿಗಂಬರ ಪೂಜಾರ, ಸಂಗೀತ ಶಿಕ್ಷಕಿ ಶೈಲಜಾ ರಾಯಬಾಗಿ, ಕೊಪ್ಪಳದ ಪಾವಣಸ್ಕರ್ ಮ್ಯೂಸಿಕ್‌ನ ಸಂಸ್ಥಾಪಕ ಅನಂತ ಪಾವಣಸ್ಕರ ಭಾಗವಹಿಸಲಿದ್ದಾರೆ ಎಂದು ಗುರುಕುಲದ ಪ್ರಾಚಾರ್ಯರಾದ ಗಾಯತ್ರಿ ಕುಲಕರ್ಣಿ ತಿಳಿಸಿದ್ದಾರೆ.

---

## ಡೆಂಘೀ ಮುನ್ನೆಚ್ಚರಿಕೆಯಿರಲಿ

▶▶ಮೊದಲನೇ ಪುಟದಿಂದ

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ ಮಾತನಾಡಿ, ಗದಗ ಜಿಲ್ಲೆಯಲ್ಲಿ 2024ರ ಜುಲೈ 19ವರವರೆಗೆ 1750 ಪ್ರಕರಣವನ್ನು ಸಂಶಯಾಸ್ಪದವೆಂದು ಗುರುತಿಸಿ, 1373 ಜನರ ರಕ್ತದ ಮಾದರಿ ಪರೀಕ್ಷಿಸಲಾಗಿದೆ. ಆ ಪೈಕಿ 117 ಜನರಿಗೆ ಡೆಂಘೀ ಜ್ವರ ಇದ್ದುದು ಖಚಿತಪಟ್ಟಿದೆ. 21 ಜನರು ಜಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಅದರಲ್ಲಿ 4 ಜನರು ಐಸಿಯುದಲ್ಲಿದ್ದಾರೆ. 12 ಜನರು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಡಾ. ವೆಂಕಟೇಶ ನಾಯ್ಕ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ಜಿಲ್ಲಾ ಆರ್.ಸಿ.ಎಚ್.ಅಧಿಕಾರಿ ಡಾ.ಮೀನಾಕ್ಷಿ, ಡಾ. ವೈ.ಕೆ. ಭಜಂತ್ರಿ, ಡಾ. ಮಹೇಶ ಕೊಪ್ಪಳ, ಪ್ರಮುಖರಾದ ಸುಧೀರ ಕಾಟಿಗೇರ, ಕೀಟಶಾಸ್ತ್ರಜ್ಞರಾದ ಅನ್ನಪೂರ್ಣ ಶೆಟ್ಟರ್, ಜಿಲ್ಲಾ ಸರ್ವೇಕ್ಷಣಾ ಘಟಕದ ಸಿಬ್ಬಂದಿಗಳು, ಗದಗ ತಾಲೂಕಿನ ವಿವಿಧ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಆರೋಗ್ಯ ನಿರೀಕ್ಷಣಾಧಿಕಾರಿಗಳು, ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು, ಆಶಾ ಕಾರ್ಯಕರ್ತೆಯರು ಹಾಜರಿದ್ದರು.

---

**ಉಚಿತ ಯೋಗಾಸನ ಕ್ರೀಡಾ ತರಬೇತಿ ಶಿಬಿರ ಸಮಾರೋಪ ಸಮಾರಂಭ**

## ಪ್ರತಿಭೆ ಹೊರಹೊಮ್ಮಲು ಸ್ಪರ್ಧೆಗಳು ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ




ಪ್ರಕೃತಿಯ ಎಲ್ಲ ಚರಾಚರ ವಸ್ತುಗಳಲ್ಲಿ ಒಂದು ಶಕ್ತಿ ಇರುತ್ತದೆ. ಅದನ್ನು ಗುರುತಿಸಿ, ಪ್ರಕೃತಿದತ್ತ ಕೊಡುಗೆಗಳನ್ನು ನಾವು ಉಪಯೋಗಿಸಿಕೊಂಡರೆ ನಮಗೆ ಅದೆಷ್ಟೋ ಲಾಭಗಳು ದೊರೆಯುತ್ತವೆ. ಹೀಗೆಯೆ ವ್ಯಕ್ತಿಯಲ್ಲಿ, ಮುಖ್ಯವಾಗಿ ಮಕ್ಕಳಲ್ಲಿ ಯಾವುದಾದರೊಂದು ಪ್ರತಿಭೆ ಇದ್ದೇ ಇರುತ್ತದೆ. ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಲು ವಿಧಾನಗಳು ಸಾಕಷ್ಟಿದ್ದರೂ ಸ್ಪರ್ಧೆಗಳು ಪ್ರಮುಖವಾಗಿವೆ ಎಂದು ಗದಗ ಲೋಕೋಪಯೋಗಿ ಇಲಾಖೆಯಲ್ಲಿ ಸಾಂಖಿಕ ನಿರೀಕ್ಷಕ ಮಹಾಂತೇಶ ಕರಕಿಕಟ್ಟಿ ಅಭಿಪ್ರಾಯಪಟ್ಟರು.

ಎಸ್.ವಾಂಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆಸಿದ 542ನೇ ಅನ್ವೇಷಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿ, ನಾನೂ ಒಬ್ಬ ಕ್ರೀಡಾಪಟು. ಪ್ರಾರಂಭಿಕ ಹಂತದಲ್ಲಿಯೇ ಮಕ್ಕಳಿಗೆ ಕ್ರೀಡಾ ತರಬೇತಿ ಮತ್ತು ಪ್ರೋತ್ಸಾಹ ದೊರೆತರೆ ಅವರು ಒಲಿಂಪಿಕ್ ಕ್ರೀಡಾಪಟುವಾಗಲು ಸಾಧ್ಯ ಎಂದು ಹೇಳಿದರು.

ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರು, ಯೋಗಾಸನ ಕ್ರೀಡಾ ತರಬೇತುದಾರ ಚೇತನ ಚುಂಚಾ, ನಿವೃತ್ತ ಕೆ.ವಿ.ಜಿ. ಬ್ಯಾಂಕ್ ಅಧಿಕಾರಿ ಎಂ.ಎಂ. ನರವಣಿ ಉಪಸ್ಥಿತರಿದ್ದರು.

ಒಂದು ವಾರ ಕಾಲ ಉಚಿತ ಯೋಗಾಸನ ಕ್ರೀಡಾ ತರಬೇತಿ ಶಿಬಿರ ಸಂಘಟಿಸಿದ ಗದಗ ಜಿಲ್ಲಾ ಯೋಗ ಒಕ್ಕೂಟ ಮತ್ತು ಗದಗ ಜಿಲ್ಲಾ ಅಮೆಚೂರ ಯೋಗಾಸನ ಕ್ರೀಡಾ ಸಂಸ್ಥೆ ಗದಗ ಇವರು ಜುಲೈ 27 ಮತ್ತು 28ರಂದು ಕಡೂರಿನಲ್ಲಿ ನಡೆಯುವ ರಾಜ್ಯಮಟ್ಟದ ಯೋಗಾಸನ ಕ್ರೀಡಾ ಚಾಂಪಿಯನ್‌ಶಿಪ್ ಸ್ಪರ್ಧೆಗಳಲ್ಲಿ ಭಾಗವಹಿಸಲಿರುವ ಮತ್ತು ತರಬೇತಿ ಪಡೆದ ಕ್ರೀಡಾಪಟುಗಳಿಗೆ ಪ್ರೋತ್ಸಾಹಿಸಲು ಸ್ಮರಣಿಕೆಗಳನ್ನು ನೀಡಿದರು.

ಪ್ರಾರಂಭದಲ್ಲಿ ಸುಧಾ ಪಾಟೀಲ ಪ್ರಾರ್ಥಿಸಿದರು. ಯಶವಂತ ಮತ್ತೂರ ಸ್ವಾಗತಿಸಿದರು. ಚೇತನ ಚುಂಚಾ ಕಾರ್ಯಕ್ರಮ ನಿರೂಪಿಸಿದರು. ಸಂಜನಾ ಸಜ್ಜನರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಮಾತನಾಡಿ, ಇತ್ತೀಚೆಗೆ ಯೋಗಾಸನ ಕ್ರೀಡೆಯನ್ನು ಒಲಿಂಪಿಕ್ ಕ್ರೀಡೆಗಳಲ್ಲಿ ಸೇರಿಸುವ ಪ್ರಯತ್ನಗಳು ಉನ್ನತ ಹಂತದಲ್ಲಿ ನಡೆದಿವೆ. ಈಗಾಗಲೇ ಶಾಲೆ-ಕಾಲೇಜು, ವಿಶ್ವವಿದ್ಯಾಲಯ ಮಟ್ಟದಲ್ಲಿ ಯೋಗಾಸನ ಕ್ರೀಡೆಯನ್ನು ಕಡ್ಡಾಯಗೊಳಿಸಲಾಗಿದೆ. ಯೋಗಾಸನ ಕ್ರೀಡೆಯನ್ನು ನಾವೆಲ್ಲರೂ ಪ್ರೋತ್ಸಾಹಿಸಿದರೆ ಪ್ರಚಲಿತದಲ್ಲಿರುವ ಅನೇಕ ಸಮಸ್ಯೆಗಳಿಗೆ ಪರಿಹಾರ ದೊರೆಯುವದೆಂದು ತಿಳಿಸಿದರು.

### ಮೊದಲ ಬಾರಿಗೆ ಲಕ್ಷ್ಮೇಶ್ವರಕ್ಕೆ ಭೇಟಿ ನೀಡಿದ ನೂತನ ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ

# ಜಿಲ್ಲಾಧಿಕಾರಿಗಳೆದುರು ಸಮಸ್ಯೆಗಳ ಬುತ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗದಗ ಜಿಲ್ಲಾಧಿಕಾರಿಗಳಾಗಿ ಅಧಿಕಾರ ಸ್ವೀಕರಿಸಿದ ನಂತರ ಪ್ರಥಮ ಬಾರಿಗೆ ಲಕ್ಷ್ಮೇಶ್ವರಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಗೋವಿಂದ ರೆಡ್ಡಿಯವರು ತಹಸೀಲ್ದಾರ ಕಚೇರಿ ಮತ್ತು ಪುರಸಭೆಗೆ ಆಗಮಿಸಿ ತಾಲೂಕಿನ ಕ್ಷೇತ್ರ ವ್ಯಾಪ್ತಿ, ಬೇಕು-ಬೇಡಿಕೆ, ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದರು.

ತಹಸೀಲ್ದಾರ ಕಚೇರಿಗೆ ಆಗಮಿಸಿದ ವೇಳೆ ಅಲ್ಲಿನ ವಿವಿಧ ವಿಭಾಗಗಳ ಕಾರ್ಯವೈಖರಿ ಪರಿಶೀಲಿಸಿ ಸಿಬ್ಬಂದಿಗಳಿಂದ ಮಾಹಿತಿ ಪಡೆದರು. ತಹಸೀಲ್ದಾರ ವಾಸುದೇವ ಸ್ವಾಮಿ ಅವರಿಂದ ಕಂದಾಯ ಇಲಾಖೆಯ ಸಮಗ್ರ ಮಾಹಿತಿ, ತಾಲೂಕಾಡತ ಸೌಧ ನಿರ್ಮಾಣದ ಬಗ್ಗೆ ಮಾಹಿತಿ ಪಡೆದರು. ಈ ವೇಳೆ ತಹಸೀಲ್ದಾರ ಕಚೇರಿಯ ಸಿಬ್ಬಂದಿಗಳು ಜಿಲ್ಲಾಧಿಕಾರಿಗಳನ್ನು ಸನ್ಮಾನಿಸಿದರು.

ಬಳಿಕ ಪುರಸಭೆಗೆ ಆಗಮಿಸಿ ಪುರಸಭೆಯ ವಿವಿಧ ವಿಭಾಗಗಳ ಕಾರ್ಯದ ವ್ಯವಸ್ಥೆ ಪರಿಶೀಲಿಸಿ ಸಿಬ್ಬಂದಿಗಳಿಂದ ಮಾಹಿತಿ ಪಡೆದರು. ಜಿಲ್ಲಾಧಿಕಾರಿಗಳು ಬರುತ್ತಾರೆಂಬ ಮಾಹಿತಿ ತಿಳಿದು ಸೇರಿದ್ದ ಸಾರ್ವಜನಿಕರು ಪಟ್ಟಣದ ಹತ್ತಾರು ಪ್ರಮುಖ ಸಮಸ್ಯೆಗಳನ್ನು



ಜಿಲ್ಲಾಧಿಕಾರಿಗಳೆದುರು ಬಿಚ್ಚಿಟ್ಟರು.

ಪಟ್ಟಣದಲ್ಲಿ ಐದಾರು ವರ್ಷಗಳ ಹಿಂದೆ 40 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಿದ ಒಳಚರಂಡಿ ಕಾಮಗಾರಿಯಿಂದ ಪಟ್ಟಣದಲ್ಲಿನ ಎಲ್ಲ ರಸ್ತೆಗಳು ಸಂಪೂರ್ಣ ಹಾಳಾಗಿವೆ. ಒಳಚರಂಡಿ ಯೋಜನೆಯೂ ಸಾಕಾರಗೊಳ್ಳದೇ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂ ನಷ್ಟವಾಗಿದೆ. ತುಂಗಭದ್ರಾ ನದಿಯಿಂದ ಪಟ್ಟಣ ಸೇರಿ ಗ್ರಾಮೀಣ ಭಾಗಕ್ಕೆ ನೀರು ಸರಬರಾಜಾಗುವ ಪೈಪ್‌ಲೈನ್, ವಿದ್ಯುತ್ ವ್ಯವಸ್ಥೆ ಸಂಪೂರ್ಣ ಹಾಳಾಗಿ ಮಳೆಗಾಲದಲ್ಲೂ 15/20 ದಿನಗಳಿಗೊಮ್ಮೆ ನೀರು ಬರುತ್ತದೆ ಎಂದು ತಿಳಿಸಿದರು.


ಎಲ್ಲವನ್ನೂ ಸಮಾಧಾನಚಿತ್ತದಿಂದ ಆಲಿಸಿದ ಜಿಲ್ಲಾಧಿಕಾರಿಗಳು, ನಗರೋತ್ಥಾನ ಯೋಜನೆ ಕಾಮಗಾರಿಯಲ್ಲಾದ ತೊಂದರೆ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಕಾಮಗಾರಿ ಪೂರ್ಣಗೊಳ್ಳುವಂತೆ ಕ್ರಮ ಕೈಗೊಳ್ಳುತ್ತೇನೆ. ಕುಡಿಯುವ ನೀರಿನ ಹೊಸ ಪೈಪ್‌ಲೈನ್ ಅಳವಡಿಕೆಗೆ ಕೆಯುಡಬ್ಲೂಎಸ್‌ನಿಂದ 59 ಕೋಟಿ ರೂ ಕ್ರಿಯಾಯೋಜನೆ ಕಳುಹಿಸಲಾಗಿದೆ. ರಸ್ತೆಯ ಸಮಸ್ಯೆ ಕುರಿತು ಸಾರ್ವಜನಿಕರಿಂದ ಮತ್ತು ಪತ್ರಿಕೆಗಳಲ್ಲಿ ಸಹ ವರದಿಯಾಗಿರುವದನ್ನು ಗಮನಿಸಿದ್ದು, ಈ ಕುರಿತಂತೆ ತುರ್ತು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವದು. ಪುರಸಭೆಗಳಿಗೆ ಮೊದಲೇ ಅನುದಾನ ಕಡಿಮೆ. ತೆರಿಗೆ ಸಂಗ್ರಹ ನಿಧಿಯೇ ಪ್ರಮುಖ ಆದಾಯವಾಗಿರುತ್ತದೆ. ತೆರಿಗೆ ವಸೂಲಿಯಾಗದಿದ್ದರೆ ಅಭಿವೃದ್ಧಿ ಕಾರ್ಯ, ಅಗತ್ಯ ಸೌಲಭ್ಯ ಕಲ್ಪಿಸುವುದು ಕಷ್ಟವಾಗುತ್ತದೆ. ಆದ್ದರಿಂದ ಆಸ್ತಿ ತೆರಿಗೆ ಬಾಕಿ ವಸೂಲಿಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ತಿಳಿಸಿದ್ದೇನೆ. ಈ ಬಗ್ಗೆ ಕಚೇರಿಯಿಂದಲೂ ಆದೇಶ ಹೊರಡಿಸಲಾಗುವದು ಎಂದರು.

ಈ ವೇಳೆ ಉಪವಿಭಾಗಾಧಿಕಾರಿ ವೆಂಕಟೇಶ ನಾಯಕ್, ತಹಸೀಲ್ದಾರ ವಾಸುದೇವ ಸ್ವಾಮಿ, ಕಂದಾಯ ನಿರೀಕ್ಷಕ ಬಿ.ಎಂ. ಕಾತ್ರಾಳ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ವೀರೇಂದ್ರಸಿಂಗ್ ಕಾಟೇವಾಲೆ, ಆರ್.ಬಿ. ಅಜ್ಜಣ್ಣವರ, ಮಂಜುನಾಥ ಮುದಗಲ್, ಮಂಜುಳಾ ಹೂಗಾರ, ಸಾರ್ವಜನಿಕರಾದ ಶರಣು ಗೋಡಿ, ಇಸ್ಮಾಯಿಲ್ ಆಡೂರ, ನಾಗೇಶ ಅಮರಾಪೂರ, ಶಂಕರ ಗೋಡಿ, ಆರ್.ಬಿ. ದನದಮನಿ, ಪ್ರಕಾಶ ಮುಳಗುಂದ ಸೇರಿ ಅನೇಕರಿದ್ದರು.

ಪಟ್ಟಣದಲ್ಲಿ ನಗರೋತ್ಥಾನ ಯೋಜನೆಯಡಿ ಒಂದೂವರೆ ವರ್ಷದಿಂದ ನಡೆಯುತ್ತಿರುವ 8.50 ಕೋಟಿ ರೂ ಅನುದಾನದ ವಿವಿಧ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿವೆ ಮತ್ತು ಕೆಲವು ಅಪೂರ್ಣ, ಅವೈಜ್ಞಾನಿಕ, ಕಳಪೆಯಾಗಿವೆ. ತಾಲೂಕಾ ಕೇಂದ್ರ ಘೋಷಣೆ ನಾಮಕಾವಸ್ತೆಯಾಗಿದೆ. ಪುರಸಭೆ ಸೇರಿ ವಿವಿಧ ಇಲಾಖೆಗಳಲ್ಲಿ ಸಿಬ್ಬಂದಿ ಕೊರತೆಯಿದೆ. ವಾರ್ಡ್‌ಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನವಿಲ್ಲ. ರಸ್ತೆಗಳು ಸಂಪೂರ್ಣ ಹಾಳಾಗಿವೆ ಹೀಗೆ ಹತ್ತಾರು ಸಮಸ್ಯೆಗಳ ಪಟ್ಟಿಯನ್ನೇ ಸದಸ್ಯರಾದ ಸಿಕಂದರ ಕಣಿಕೆ, ಫಿರ್ದೋಸ ಆಡೂರ, ಸಂಘಟನೆಗಳ ಮುಖಂಡರಾದ ಶರಣು ಗೋಡಿ, ನಾಗೇಶ ಅಮರಾಪುರ ಬಿಚ್ಚಿಟ್ಟರು.




## ಸ್ವಾಮಿ ನಿರ್ಭಯಾನಂದ ಸರಸ್ವತಿಯವರಿಂದ ಪ್ರವಚನ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎ.ಪಿ.ಎಮ್.ಸಿ ಯಾರ್ಡ್ ಆವರಣದಲ್ಲಿರುವ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಗುರು ಪೂರ್ಣಿಮೆ ನಿಮಿತ್ತ ಕರುನಾಡಿನ ಶ್ರೇಷ್ಠ ಯತಿಗಳು ಹಾಗೂ ಗದಗ-ವಿಜಯಪುರ ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ಪರಮಪೂಜ್ಯ ಶ್ರೀ ಸ್ವಾಮಿ ನಿರ್ಭಯಾನಂದ ಸರಸ್ವತಿ ಮಹಾರಾಜರಿಂದ ಜುಲೈ 19ರಂದು ಆಧ್ಯಾತ್ಮಿಕ ಪ್ರವಚನ ಪ್ರಾರಂಭವಾಗಿದ್ದು, ಜುಲೈ 21ರವರೆಗೆ ಪ್ರತಿದಿನ ಸಂಜೆ 6.45ರಿಂದ 7.45ರವರೆಗೆ ಏರ್ಪಡಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹಾಗೂ ಆಶ್ರಮದ ಭಕ್ತರು ಆಗಮಿಸಿ ದಿವ್ಯತ್ರೇಯ ಕೃಪೆಗೆ ಪತ್ರರಾಗಬೇಕಾಗಿ ಆಶ್ರಮದ ಪರವಾಗಿ ರಾಮಚಂದ್ರ ಕುಲಕರ್ಣಿಯವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಶಾಸಕನಲ್ಲದಿದ್ದರೂ ಅಭಿವೃದ್ಧಿ ಕಾರ್ಯ ನಿರಂತರ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ನಾನು ಮುಖ್ಯಮಂತ್ರಿಯಾಗಿ ಹಲವಾರು ಅಭಿವೃದ್ಧಿ ಕಾರ್ಯಕ್ರಮ ಮಾಡಿದ್ದು, ರೈತರ ಮಕ್ಕಳಿಗೆ ವಿದ್ಯಾನಿಧಿ, ರೈತರ ಪಂಪ್‌ಸೆಟ್‌ಗಳಿಗೆ ಡಿಸೇಲ್ ಸಬ್ಸಿಡಿ, ಐದು ಲಕ್ಷದವರೆಗೆ ಶೂನ್ಯ ಬಡ್ಡಿ ಸಾಲ ಯೋಜನೆ ಮಾಡಿದೆ. ಅದರ ಎಲ್ಲ ಪುಣ್ಯ ಕ್ಷೇತ್ರದ ಜನತೆಗೆ ಸಲ್ಲುತ್ತದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಶಿಗ್ಗಾವಿ-ಸವಣೂರು ಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಮತದಾರರಿಗೆ ಧನ್ಯವಾದ ಯಾತ್ರೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಪ್ರವಾಹ ಬಂದ ಸಂದರ್ಭದಲ್ಲಿ ಶಿಗ್ಗಾವಿ ತಾಲೂಕಿನಲ್ಲಿ 13 ಸಾವಿರ



ಮನೆಗಳನ್ನು ನೀಡಿರುವುದು ಒಂದು ದಾಖಲೆಯಾಗಿದೆ. ರೈತರಿಗೆ ಡಿಸೇಲ್ ಸಬ್ಸಿಡಿ, ಯಶಸ್ವಿನಿ ಯೋಜನೆ ಮರು ಜಾರಿ ಮಾಡಿರುವುದು, ಸಮುದಾಯ ಭವನ, ಕುಡಿಯುವ ನೀರಿನ ಸೌಲಭ್ಯ ಒದಗಿಸಿದ್ದೇನೆ. ಅಭಿವೃದ್ಧಿ ನಿರಂತರವಾಗಿ ನಡೆಯಬೇಕು ಎಂದು ಹೇಳಿದರು.

ಪಕ್ಷದ ವರಿಷ್ಠರು ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಹೇಳಿದ್ದಕ್ಕೆ ಹಾವೇರಿ ಗದಗ ಲೋಕಸಭೆ ಕ್ಷೇತ್ರದ ಸಂಸದನಾಗಿದ್ದೇನೆ. ಆದರೆ, ನನ್ನ ಮನಸ್ಸು ಮಾತ್ರ ಶಿಗ್ಗಾವಿ-ಸವಣೂರಿನಲ್ಲಿಯೇ ಇದೆ. ನಾನು ಶಾಸಕನಲ್ಲದಿದ್ದರೂ ಈ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮುಂದುವರೆಸಿಕೊಂಡು ಹೋಗುತ್ತೇನೆ ಎಂದರು.

## ಉಸ್ತುವಾರಿ ಸಚಿವ ಸಂತೋಷ ಲಾಡ್ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಾರ್ಮಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ಜುಲೈ 20ರಂದು ಧಾರವಾಡ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಬೆಳಿಗ್ಗೆ 11 ಗಂಟೆಗೆ ಕೆ.ಎಂ.ಸಿ ಆಡಳಿತ ವರ್ಗದ ಸಭೆಯನ್ನು ಕೈಗೊಳ್ಳುವರು. ನಂತರ ಮಧ್ಯಾಹ್ನ 3 ಗಂಟೆಗೆ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಸಭೆಯನ್ನು ಜರುಗಿಸುವರು. ರಾತ್ರಿ 7.30ಕ್ಕೆ ಸಚಿವರು ಹುಬ್ಬಳ್ಳಿಯಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗುರುಪೂರ್ಣಿಮೆಯ ವಿಶೇಷ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಹುಡ್ಕೋ ಕಾಲೋನಿಯ ಆದರ್ಶ ನಗರದಲ್ಲಿನ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಗುರುಪೂರ್ಣಿಮೆ ನಿಮಿತ್ತ ಜುಲೈ 21ರಂದು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬೆಳಿಗ್ಗೆ 6-30ಕ್ಕೆ ಸಾಯಿಬಾಬಾರಿಗೆ ಮಂಗಲ ಸ್ನಾನ, ರುದ್ರಾಭಿಷೇಕ, ಮಹಾಮಂಗಳಾರತಿ ಜರುಗಲಿದೆ. ನಂತರ 10 ಗಂಟೆಗೆ ಶ್ರೀ ಸಾಯಿ ಸತ್ಯನಾರಾಯಣ ಪೂಜೆ, 12 ಗಂಟೆಗೆ ಮಹಾಮಂಗಳಾರತಿ, ಮಹಾಪ್ರಸಾದ ಜರುಗುವುದು. ಸಾಯಂಕಾಲ 6-30ಕ್ಕೆ ಧೂಪಾರತಿ, ರಾತ್ರಿ 8 ಗಂಟೆಗೆ ಶೇಜಾರತಿ ಜರುಗಲಿದ್ದು, ಈ ಎಲ್ಲ ಕಾರ್ಯಕ್ರಮಗಳಲ್ಲಿ ಸದ್ಭಕ್ತರು ಪಾಲ್ಗೊಳ್ಳುವಂತೆ ಪ್ರಕಟಣೆಯಲ್ಲಿ ವಿನಂತಿಸಿದೆ.

### ನಿಕಟಪೂರ್ವ ಡಿಸಿ ವೈಶಾಲಿ ಎಂ.ಎಲ್ ಅವರಿಗೆ ಬೀಳ್ಕೊಡುಗೆ, ನೂತನ ಡಿಸಿ ಗೋವಿಂದರೆಡ್ಡಿ ಅವರಿಗೆ ಸ್ವಾಗತ

# ಎಲ್ಲರ ಸಹಕಾರದಿಂದ ಉತ್ತಮ ಆಡಳಿತ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಗೆ ಪ್ರಥಮ ಬಾರಿ ಜಿಲ್ಲಾಧಿಕಾರಿಯಾಗಿ ಆಗಮಿಸಿದಾಗ ಹಲವಾರು ಸವಾಲುಗಳು ಎದುರಾದರೂ ಅವುಗಳನ್ನು ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರ ಸಹಕಾರದಿಂದ ಸಮರ್ಥವಾಗಿ ಎದುರಿಸಲಾಯಿತು ಎಂದು ನಿಕಟಪೂರ್ವ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಹೇಳಿದರು.



ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ಜರುಗಿದ ನಿಕಟಪೂರ್ವ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರಿಗೆ ಬೀಳ್ಕೊಡುಗೆ ಹಾಗೂ ನೂತನವಾಗಿ ಜಿಲ್ಲಾಧಿಕಾರಿಗಳಾಗಿ ಆಗಮಿಸಿದ ಗೋವಿಂದರೆಡ್ಡಿ ಅವರಿಗೆ ಸ್ವಾಗತ ಸಮಾರಂಭದಲ್ಲಿ ಅವರು ಮಾತನಾಡಿದರು.

ಗದಗ ಜಿಲ್ಲೆಗೆ ಆಗಮಿಸಿದ ನಂತರ ವಿಧಾನಸಭಾ ಹಾಗೂ ಲೋಕಸಭಾ ಚುನಾವಣೆಗಳನ್ನು ಮತ್ತು ಉತ್ಸವಗಳನ್ನು ಅತ್ಯಂತ ಯಶಸ್ವಿಯಾಗಿ ತಮ್ಮೆಲ್ಲರ ಸಹಕಾರದಿಂದ ನಿಭಾಯಿಸಿದ ಸಂತಸ ನನಗಿದೆ. ಒಬ್ಬರೇ ಕೆಲಸ ಮಾಡುವುದಕ್ಕಿಂತ ಎಲ್ಲರೂ ಒಟ್ಟಾಗಿ ಕೆಲಸ ಮಾಡುವ ಮೂಲಕ ಗದಗ ಜಿಲ್ಲೆಯನ್ನು ರಾಜ್ಯದ ವಿವಿಧ ಜಿಲ್ಲೆಗಳಿಗಿಂತ ಉತ್ತಮ ಪ್ರಗತಿಯಲ್ಲಿರುವುದಕ್ಕೆ ನೋಡಿಕೊಳ್ಳುವುದಕ್ಕೆ ಕಾರಣವಾಯಿತು. ಪ್ರಗತಿ ಪರಿಶೀಲನೆ ನಡೆಸುವಾಗ ಪ್ರಗತಿ ಸಾಧಿಸದ ಅಧಿಕಾರಿಗಳಿಗೆ ಕೋಪದಿಂದ ಬೈದದ್ದು ಉಂಟು. ಆ ಕೋಪ ಕೇವಲ ಕೆಲಸಕ್ಕೆ ಮಾತ್ರ ಸೀಮಿತ. ವೈಯಕ್ತಿಕವಾಗಿ ಯಾವುದೇ ತರಹದ ದ್ವೇಷ ಇಲ್ಲ. ಜಿಲ್ಲೆಯಲ್ಲಿ ಎರಡು ವರ್ಷ ಕೆಲಸ ಮಾಡಲು ಸಹಕಾರ ನೀಡಿದ ಎಲ್ಲ ನೌಕರರಿಗೂ, ಸಾರ್ವಜನಿಕರಿಗೂ, ರಾಜಕೀಯ ಪ್ರತಿನಿಧಿಗಳಿಗೂ ಧನ್ಯವಾದಗಳು ಎಂದರು.

ನೂತನ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಮಾತನಾಡಿ, ನಿರ್ಗಮಿತ ಜಿಲ್ಲಾಧಿಕಾರಿಗಳಾದ ವೈಶಾಲಿ ಎಂ.ಎಲ್ ಅವರು ಉತ್ತಮ ಆಡಳಿತಗಾರರು. ಗದಗ ಜಿಲ್ಲೆಯನ್ನು ಕಂದಾಯ ವಿಷಯ ಸೇರಿದಂತೆ ಹಲವಾರು ವಿಷಯಗಳಲ್ಲಿ ಉತ್ತಮ ಸ್ಥಾನದಲ್ಲಿರುವಂತೆ ನೋಡಿಕೊಂಡಿದ್ದಾರೆ. ಅಪಾರ ಆಡಳಿತದ ಅನುಭವ ಹೊಂದಿದ ಅವರು ಯಾವುದೇ ಹುದ್ದೆ ನೀಡಿದರೂ ಅದನ್ನು ಸಮರ್ಥವಾಗಿ ನಿಭಾಯಿಸುವ ಮೂಲಕ ಉತ್ತಮ ಪ್ರಗತಿ ಸಾಧಿಸುವ ಛಲ ಹೊಂದಿದವರು. ಜಿಲ್ಲೆಯ ಜನತೆಯೊಂದಿಗೆ ಅವಿನಾಭಾವ ಸಂಬಂಧ ಹೊಂದಿರುವ ಅವರು ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾಗಿರುವುದು ಜಿಲ್ಲೆಗೆ ಸಹಕಾರಿಯಾಗಲಿದೆ ಎಂದರು.

ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಮಾತನಾಡಿ, ಅಲ್ಪ ಸಮಯದಲ್ಲಿಯೇ ಲೋಕಸಭಾ ಚುನಾವಣೆಯನ್ನು ವೈಶಾಲಿ ಎಂ.ಎಲ್. ಅವರೊಂದಿಗೆ ನಿರ್ವಹಿಸಿರುವುದು ಸಂತಸ ತಂದಿದೆ. ಅವರ ನೇತೃತ್ವದಲ್ಲಿ ಕಂದಾಯ ಇಲಾಖೆ ಜಿಲ್ಲೆಯಲ್ಲಿ ಉತ್ತಮ ಕಾರ್ಯಗಳನ್ನು ಮಾಡಿದೆ. ಅವರು ಇನ್ನೂ ಉತ್ತಮ ಉನ್ನತ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಲಿ ಎಂದು ಹಾರೈಸಿದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಡಾ. ವೆಂಕಟೇಶ ನಾಯ್ಕ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ಎಸ್.ಜಿ. ಪಲ್ಲೇದ, ತಹಸೀಲ್ದಾರರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ ಸೇರಿದಂತೆ ವಿವಿಧ ಅಧಿಕಾರಿ, ನೌಕರರು ತಮ್ಮ ಅನಿಸಿಕೆ ಅಭಿಪ್ರಾಯಗಳನ್ನು ಹಂಚಿಕೊಂಡರು. ಕಾರ್ಯಕ್ರಮದಲ್ಲಿ ನಿಕಟಪೂರ್ವ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹಾಗೂ ನೂತನ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರುಗಳಿಗೆ ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು.




ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಸರ್ಕಾರಿ ಸೇವೆಯಲ್ಲಿ ನೌಕರರಿಗೆ ವರ್ಗಾವಣೆ ಎನ್ನುವುದು ಸರ್ವೇ ಸಾಮಾನ್ಯ. ನನಗೆ ಹಿರಿಯ ಸಹೋದರಿಯಾಗಿ ವೈಶಾಲಿ ಎಂ.ಎಲ್ ಅವರು ನನ್ನ ಬೆಂಬಲಕ್ಕೆ ನಿಲ್ಲುವ ಮೂಲಕ ಉತ್ತಮ ಕಾರ್ಯಗಳನ್ನು ಮಾಡಲು ಸಹಕಾರಿಯಾಗಿದ್ದರು. ಜಿಲ್ಲಾಧಿಕಾರಿಗಳಾಗಿ ಆಗಮಿಸಿದ ಗೋವಿಂದರೆಡ್ಡಿ ಅವರು ಧಾರವಾಡದಲ್ಲಿ ಅಭ್ಯಸಿಸಿದ ವಿಷಯದಲ್ಲಿಯೇ ನಾನೂ ಮತ್ತು ಅವರು ಚಿನ್ನದ ಪದಕ ಪಡೆದವರಾಗಿದ್ದು, ಈ ಹಿಂದೆ ಅವರೊಂದಿಗೆ ಕೆಲಸ ಮಾಡಿದ್ದೇನೆ ಎಂದು ನೆನೆದರು.

## ಡಿಪ್ಲೋಮಾ ಪ್ರವೇಶದ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನರಸಾಪೂರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಖಾಲಿ ಇರುವ ಮೊದಲ ವರ್ಷದ ಡಿಪ್ಲೋಮಾ ಸೀಟುಗಳಿಗೆ ಹಾಗೂ ಐ.ಟಿ.ಐ./ಪಿ.ಯು.ಸಿ. (ವಿಜ್ಞಾನ) ಪಾಸಾದ ವಿದ್ಯಾರ್ಥಿಗಳಿಗೆ 3ನೇ ಸೆಮಿಸ್ಟರ್ ಲ್ಯಾಟರಲ್ ಎಂಟ್ರಿ ಖಾಲಿ ಸೀಟುಗಳಿಗೆ ಪ್ರಾಂಶುಪಾಲರ ಹಂತದಲ್ಲಿ “ಆಫ್-ಲೈನ್” ಮೂಲಕ ಮೆರಿಟ್ ಹಾಗೂ ರೋಷ್ಟರ್ ಆಧಾರದ ಮೇರೆಗೆ ಡಿಪ್ಲೋಮಾ ಪ್ರವೇಶ ಪಡೆಯುವ ದಿನಾಂಕವನ್ನು ಜುಲೈ 25 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಯನ್ನು ಕಾಲೇಜಿನ ಕಚೇರಿ ಅವಧಿಯಲ್ಲಿ ಪಡೆಯಬಹುದಾಗಿದೆ.

ಕರ್ನಾಟಕ ಸರ್ಕಾರ
**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,**
**ಜಿಲ್ಲಾ ಪಂಚಾಯತ ಕಾರ್ಯಾಲಯ, ಗದಗ**
**Ph : 08372 - 230211 E-mail : ceozp.gdg@gmail.com**
ಕ್ರ.ಸಂ/ಗಜಿಪಂ/ಆ/ಸಿ3/ವಹಿ/ಗ್ರಂಥಾಲಯ/ಕಂ.ಪೂ/ಟೆ.ಪ್ರಕಟಣೆ/2024-25
ದಿನಾಂಕ : 15-07-2024

**ಇ-ಪ್ರೊಕ್ಯುರಮೆಂಟ್ ಮೂಲಕ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ (ಅರಿವು ಕೇಂದ್ರ) ಗಳನ್ನು ಡಿಜಿಟಲ್ ಗ್ರಂಥಾಲಯಗಳನ್ನಾಗಿ ಅಭಿವೃದ್ಧಿಪಡಿಸಲು ಗಣಕಯಂತ್ರ ಮತ್ತು UPS ಗಳನ್ನು ಪೂರೈಸಲು.**

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ವಿಷಯ : ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ (ಅರಿವು ಕೇಂದ್ರಗಳಿಗೆ) ಗಳನ್ನು ಡಿಜಿಟಲ್ ಗ್ರಂಥಾಲಯಗಳನ್ನಾಗಿ ಅಭಿವೃದ್ಧಿ ಪಡಿಸಲು ಗಣಕಯಂತ್ರ ಮತ್ತು UPS ಗಳನ್ನು ಪೂರೈಸಲು ಇ-ಟೆಂಡರ ಮುಖೇನ ಆಹ್ವಾನಿಸುವ ಕುರಿತು.

ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ (ಅರಿವು ಕೇಂದ್ರಗಳಿಗೆ) ಗಳನ್ನು ಡಿಜಿಟಲ್ ಗ್ರಂಥಾಲಯಗಳನ್ನಾಗಿ ಅಭಿವೃದ್ಧಿಪಡಿಸಲು ಗಣಕಯಂತ್ರ ಮತ್ತು UPS ಗಳನ್ನು ಪೂರೈಸಲು ನೊಂದಾಯಿತ ಸಂಸ್ಥೆಗಳಿಂದ ಇ-ಪ್ರೊಕ್ಯುರಮೆಂಟ್ ಮೂಲಕ ದ್ವಿ-ಲಕೋಟೆ ಪದ್ಧತಿಯಲ್ಲಿ ಟೆಂಡರ ಆಹ್ವಾನಿಸಲಾಗಿದೆ. ಟೆಂಡರ ಫಾರ್ಮಗಳನ್ನು ಹಾಗೂ ನಿಬಂಧನೆಗಳನ್ನೊಳಗೊಂಡ ಟೆಂಡರ್ ಪುಸ್ತಕವನ್ನು ದಿ: **15-07-2024** ರಿಂದ ಇ-ಪ್ರೊಕ್ಯುರಮೆಂಟ್ ವೆಬ್‌ಸೈಟ್ www.kppp.karnataka.gov.in ದಲ್ಲಿ ಇ-ಪೋರ್ಟಲ್ ನಿಗದಿಪಡಿಸಿದ ಶುಲ್ಕದೊಂದಿಗೆ ಪಡೆಯಬಹುದು. ಭರ್ತಿ ಮಾಡಿದ ಟೆಂಡರ ಫಾರ್ಮಗಳನ್ನು ದಿನಾಂಕ : **31-07-2024** ರಂದು ಸಾಯಂಕಾಲ 05:00 ಗಂಟೆಯವರೆಗೆ ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಬಹುದು. ಸ್ವೀಕರಿಸಿದ ಟೆಂಡರಗಳನ್ನು ದಿನಾಂಕ : **03-08-2024** ರಂದು ಬೆಳಿಗ್ಗೆ 11:00 ಗಂಟೆಗೆ ತಾಂತ್ರಿಕ ಬಿಡ್‌ನ್ನು ತೆರೆಯಲಾಗುವುದು. ತಾಂತ್ರಿಕ ಬಿಡ್‌ನಲ್ಲಿ ಯಶಸ್ವಿಯಾದಂತಹ ಟೆಂಡರದಾರರ ಆರ್ಥಿಕ ಬಿಡ್‌ನ್ನು ದಿನಾಂಕ : **06-08-2024** ರಂದು ಬೆಳಿಗ್ಗೆ 11:00 ಗಂಟೆಗೆ ತೆರೆಯಲಾಗುವದು. ಹೆಚ್ಚಿನ ವಿವರಗಳನ್ನು ಉಪ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ ಗದಗ ಇಲ್ಲಿ ಕೆಲಸದದಿನಗಳಂದು ಪಡೆಯಬಹುದು.

ಟೆಂಡರ ಸಂಖ್ಯೆ: RDPR/2024-25/IND3211

ಸಹಿ/- **ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,**
ವಾಸಾಸಂಇ/ಗದಗ/ಕೆಎಸ್‌ಎಂಸಿಎ/99/24-25 **ಜಿಲ್ಲಾ ಪಂಚಾಯತ, ಗದಗ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka